ಕನ್ನಡ ದಿನಪತ್ರಿಕೆ
28 ಎಪ್ರಿಲ್ । ರವಿವಾರ
28 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 60 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಇಂದು ಬೆಳಗಾವಿಗೆ ಏಕಕಾಲಕ್ಕೆ ಪಿಎಂ ಮತ್ತು ಸಿಎಂ ಎಂಟ್ರಿ



ಬೆಳಗಾವಿ: ರಾಜಕೀಯ ಪವರ್ ಸೆಂಟರ್ ಎನಿಸಿಕೊಂಡಿರುವ ಬೆಳಗಾವಿ ಅಖಾಡಕ್ಕೆ ಏಕಕಾಲಕ್ಕೆ ಪ್ರಧಾನಿ ಮೋದಿ ಮತ್ತು ಸಿಎಂ ಸಿದ್ದರಾಮಯ್ಯ ಆಗಮಿಸಲಿದ್ದಾರೆ.

ಎಪ್ರಿಲ್ 28ರ ಬೆಳಿಗ್ಗೆ 11ಕ್ಕೆ ಬೆಳಗಾವಿಯ ಮಾಲಿನಿ ಸಿಟಿಯಲ್ಲಿ ಪ್ರಧಾನಿ ಮೋದಿ ಬೃಹತ್ ಸಮಾವೇಶ ನಡೆಸಲಿದ್ದು, ಬೆಳಗಾವಿ ಮತ್ತು ಚಿಕ್ಕೋಡಿ ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳ ಪರವಾಗಿ ಪ್ರಚಾರ ಮಾಡಲಿದ್ದಾರೆ.

ಇದೇ ದಿನದಂದು ಬೆಳಗಾವಿ ಮತ್ತು ಚಿಕ್ಕೋಡಿಗೆ ಸಿಎಂ ಸಿದ್ದರಾಮಯ್ಯ ಭೇಟಿ ನೀಡಲಿದ್ದಾರೆ. ಚಿಕ್ಕೋಡಿ ಕ್ಷೇತ್ರ ವ್ಯಾಪ್ತಿಯ ಉಗಾರ್ ಖುರ್ದ, ಬೆಳಗಾವಿ ಕ್ಷೇತ್ರದ ಯರಗಟ್ಟಿಯಲ್ಲಿ ನಡೆಯುವ ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ. ಸಿಎಂ ಸಿದ್ದರಾಮಯ್ಯ ಒಂದೇ ದಿನ ಎರಡೂ ಕ್ಷೇತ್ರಗಳಲ್ಲಿ ತಲಾ ಒಂದೊಂದು ಸಮಾವೇಶ ನಡೆಸಲಿದ್ದಾರೆ.

ಬೆಳಗಾವಿ ಕಳೆದ ಎರಡು ದಶಕಗಳಿಂದ ಬಿಜೆಪಿ ಭದ್ರಕೋಟೆಯಾಗಿದೆ. ಇನ್ನು ಚಿಕ್ಕೋಡಿ ಲೋಕಸಭೆ ಕ್ಷೇತ್ರದಲ್ಲೂ ಬಿಜೆಪಿ ತನ್ನದೆಯಾದ ಪ್ರಭಾವ ಹೊಂದಿದೆ. ಹೀಗಾಗಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಈ ಬಾರಿ ಬೆಳಗಾವಿ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲಿಸಲು ಪಣ ತೊಟ್ಟಿದ್ದಾರೆ. ಈ ಸಂಬಂಧ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಕಣಕ್ಕಿಳಿಸಿ, ಬಿಜೆಪಿ ಅಭ್ಯರ್ಥಿ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರನ್ನು ಮಣಿಸಲು ರಣತಂತ್ರ ರೂಪಿಸಿದ್ದಾರೆ.

ಮಧ್ಯಾಹ್ನ 12.55ಕ್ಕೆ ಉತ್ತರ ಕನ್ನಡ ಜಿಲ್ಲೆ ಶಿರಸಿಗೆ ಆಗಮಿಸುವ ಮೋದಿ, 1 ಗಂಟೆಗೆ ಶಿರಸಿ ಸಮಾವೇಶದಲ್ಲಿ ಭಾಗಿಯಾಗುತ್ತಾರೆ. 2 ಗಂಟೆಗೆ ಶಿರಸಿಯಿಂದ ಹೊರಟು 2.50ಕ್ಕೆ ದಾವಣಗೆರೆಗೆ ತಲುಪಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ದಾವಣಗೆರೆ ಸಮಾವೇಶದಲ್ಲಿ ಪಾಲ್ಗೊಳ್ಳುತ್ತಾರೆ. ನಂತರ 4.05ಕ್ಕೆ ದಾವಣಗೆರೆಯಿಂದ ಹೊಸಪೇಟೆ ಕಡೆಗೆ ಹೊರಡುವ ಪ್ರಧಾನಿ ಮೋದಿ, ಸಂಜೆ 4.50ಕ್ಕೆ ಹೊಸಪೇಟೆ ತಲುಪಲಿದ್ದಾರೆ. 5 ಗಂಟೆಗೆ ಹೊಸಪೇಟೆ ಸಮಾವೇಶದಲ್ಲಿ ಭಾಗಿಯಾಗಿ, 6 ಗಂಟೆಗೆ ಹೊಸಪೇಟೆ ಹೋಟೆಲ್ಗೆ ಆಗಮಿಸಿ, ಅಲ್ಲೇ ವಾಸ್ತವ್ಯ ಹೂಡಲಿದ್ದಾರೆ.

ಎಪ್ರಿಲ್ 29ರ ಬೆಳಗ್ಗೆ 11 ಗಂಟೆಗೆ ಹೊಸಪೇಟೆಯಿಂದ ಮೋದಿ ನಿರ್ಗಮಿಸಿ, ಮಧ್ಯಾಹ್ನ 12.15ಕ್ಕೆ ಬಾಗಲಕೋಟೆಯ ತೋಟಗಾರಿಕೆ ವಿಶ್ವವಿದ್ಯಾಲಯ ಮೈದಾನದಲ್ಲಿ ನಡೆಯಲಿರುವ ಬಹಿರಂಗ ಸಮಾವೇಶದಲ್ಲಿ ಭಾಗಿಯಾಗುತ್ತಾರೆ. ಮಧ್ಯಾಹ್ನ 1.05ಕ್ಕೆ ಬಾಗಲಕೋಟೆಯಿಂದ ಸೊಲ್ಲಾಪುರಕ್ಕೆ ಪ್ರಯಾಣ ಬೆಳಸಲಿದ್ದಾರೆ.

ಬೆಳಗಾವಿಗೆ ಪ್ರಧಾನಿ ಮೋದಿ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಭದ್ರತೆ ದೃಷ್ಟಿಯಿಂದ ಇಂದು (ಏ.27) ರ ಮುಂಜಾನೆ 6 ಗಂಟೆಯಿಂದ ನಾಳೆ (28)ರ ಸಂಜೆ 6 ಗಂಟೆಯವರಗೆ ಡ್ರೋನ್ ಹಾರಾಟಕ್ಕೆ ನಿಷೇಧ ಹೇರಿ ಜಿಲ್ಲಾಧಿಕಾರಿ ನಿತೇಶ ಪಾಟೀಲ್ ಆದೇಶ ಹೊರಡಿಸಿದ್ದಾರೆ. ಬೆಳಗಾವಿ ತಾಲೂಕಿನ ವ್ಯಾಪ್ತಿಯನ್ನು ರೆಡ್ ಜೋನ್ ಎಂದು ಘೋಷಿಸಿದೆ.



### ಪ್ರಧಾನಿ ಮೋದಿಯವರನ್ನು ಆತ್ಮಿಯವಾಗಿ ಸ್ವಾಗತಿಸಿದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್

ಬೆಳಗಾವಿ: ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿಗೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿಯವರನ್ನು ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಆತ್ಮಿಯವಾಗಿ ಸ್ವಾಗತಿಸಿದ್ದಾರೆ.

ಜಗದೀಶ ಶೆಟ್ಟರ್ ಹಾಗೂ ಅಣ್ಣಾ ಸಾಹೇಬ ಜೊಲ್ಲೆ ಪರವಾಗಿ ಪ್ರಚಾರಕ್ಕೆ ಆಗಮಿಸಿದ ನರೇಂದ್ರ ಮೋದಿಯವರನ್ನು ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಲಾಯಿತು.

ಬಳಿಕ ಮೋದಿಯವರು ಸಾಂಬ್ರಾ ವಿಮಾನ ನಿಲ್ದಾಣದಿಂದ ರಸ್ತೆ ಮಾರ್ಗವಾಗಿ ಕಾಕತಿ ಬಳಿ ಇರುವ ಐಟಿಸಿ ವೆಲ್ ಕಮ್ ಹೋಟೆಲ್ ನಲ್ಲಿ ವಾಸ್ತವ್ಯಕ್ಕೆ ತೆರಳಿದರು.

ಪ್ರಧಾನಿ ನರೇಂದ್ರ ಮೋದಿಯವರಿಗೆ ಉತ್ತರ ಕರ್ನಾಟಕ ಶೈಲಿಯ ಜೋಳದ ರೊಟ್ಟಿ ಊಟ ತಯಾರಿಸಿದ್ದಾರೆ. ಮೊದಲಬಾರಿಗೆ ಬೆಳಗಾವಿಯಲ್ಲಿ ವಾಸ್ತವ್ಯ ಹೂಡಲಿರುವ ಪ್ರಧಾನಿ ಮೋದಿಗೆ ಊಟದ ಸವಿ ಬಡಿಸಲಾಯಿತು.

ಇಂದು ಬೆಳಗ್ಗೆ ಮೋದಿಯವರು ಯುಡಿಯುರಪ್ಪ ಮಾರ್ಗದಲ್ಲಿ ಇರುವ ಮಾಲಿನಿ ಸಿಟಿ ಮೈದಾನದಲ್ಲಿ ಬೃಹತ್ ಸಮಾವೇಶ ನಡೆಸಿ ಮಾತನಾಡಲಿದ್ದಾರೆ. ಈ ಸಾಮವೇಶದಲ್ಲಿ ಲಕ್ಷಾಂತರ ಜನ ಸೇರುವ ನಿರೀಕ್ಷೆ ಇದೆ.



### ರೈಲ್ವೆ ನಿಲ್ದಾಣದ ಬಳಿ ಕಾರಿನಲ್ಲಿದ್ದ 2 ಕೋಟಿ ರೂ. ವಶಕ್ಕೆ

ಬೆಂಗಳೂರು: ಕಾರನ್ನು ಸುತ್ತುವರೆದ ಆದಾಯ ತೆರಿಗೆ ಅಧಿಕಾರಿಗಳು ಪರಿಶೀಲನೆ ನಡೆಸಿ 2 ಕೋಟಿ ರೂ. ಹಣವನ್ನು ವಶಕ್ಕೆ ಪಡೆದಿದ್ದಾರೆ.

ಕಲಬುರಗಿಯ ರೈಲು ನಿಲ್ದಾಣದ ಬಳಿ ಇಂದು ಬೆಳಿಗ್ಗೆ ಐಟಿ ಅಧಿಕಾರಿಗಳಿಗೆ ದೊರೆತ ಮಾಹಿತಿ ಮೇರೆಗೆ ಸ್ಥಳಕ್ಕೆ ತೆರಳಿದ್ದರು. ಆ ಸಂದರ್ಭದಲ್ಲಿ ವ್ಯಕ್ತಿಯೊಬ್ಬರು ರೈಲಿನಲ್ಲಿ ಬಂದು ಅಲ್ಲಿಯೇ ನಿಂತಿದ್ದ ಕಾರನ್ನು ಹತ್ತಿದ್ದಾರೆ.

ಇನ್ನೇನು ಕಾರು ಹೊರಡಬೇಕೆನ್ನುವಷ್ಟರಲ್ಲಿ ಆದಾಯ ತೆರಿಗೆ ಅಧಿಕಾರಿಗಳು ಕಾರನ್ನು ಸುತ್ತುವರೆದು ಒಳಗೆ ಪರಿಶೀಲಿಸಿದಾಗ 2 ಕೋಟಿ ರೂ. ಪತ್ತೆಯಾಗಿದ್ದು, ಈ ಹಣಕ್ಕೆ ಸೂಕ್ತ ದಾಖಲೆ ಒದಗಿಸದ ಕಾರಣ ಕಾರಿನ ಸಮೇತ ಹಣವನ್ನು ಜಪ್ತಿ ಮಾಡಿದ್ದಾರೆ. ಈ ಹಣ ಮತ್ತು ಕಾರು ಯಾರಿಗೆ ಸೇರಿದ್ದು ಎಂಬ ಬಗ್ಗೆ ಐಟಿ ಅಧಿಕಾರಿಗಳು ಮಾಹಿತಿ ಕಲೆ ಹಾಕುತ್ತಿದ್ದಾರೆ.

ನಿನ್ನೆ ರಾಜ್ಯದ 14 ಲೋಕಸಭಾ ಕ್ಷೇತ್ರಗಳಿಗೆ ಮತದಾನವಾಗಿದೆ. ಮೇ 7 ರಂದು ಕಲಬುರಗಿ ಸೇರಿದಂತೆ ಇನ್ನುಳಿದ 14 ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿರುವ ಹಿನ್ನೆಲೆಯಲ್ಲಿ ಇಂದು ನಡೆದಿರುವ ಐಟಿ ದಾಳಿ ಮಹತ್ವದ್ದಾಗಿದೆ.

ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನಕ್ಕೂ ಮುನ್ನ ಐಟಿ ಅಧಿ ಕಾರಿಗಳು ಹಲವೆಡೆ ದಾಳಿ ನಡೆಸಿ ಕೋಟ್ಯಂತರ ರೂ. ಹಣ ವಶ ಪಡಿಸಿಕೊಂಡಿದ್ದು, ದಾಳಿ ಮುಂದುವರೆಸಿದ್ದಾರೆ.

### ನ್ಯಾಯಾಧೀಶರ ಸಮ್ಮುಖದಲ್ಲಿಯೇ ಆರೋಪಿ ಫಯಾಜ್ ನ ರಕ್ತದ ಮಾದರಿ ಸಂಗ್ರಹಿಸಿದ ವೈದ್ಯರು



ಹುಬ್ಬಳ್ಳಿ: ಹುಬ್ಬಳ್ಳಿಯಲ್ಲಿ ಎಂಸಿಎ ವಿದ್ಯಾರ್ಥಿನಿ ನೇಹಾ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ವೈದ್ಯರು, ಆರೋಪಿ ಫಯಾಜ್ ನ ರಕ್ತದ ಮಾದರಿ ಸಂಗ್ರಹಿಸಿದ್ದಾರೆ.

ಪ್ರಕರಣದ ತನಿಖೆ ನಡೆಸುತ್ತಿರುವ ಸಿಐಡಿ ತಂಡ, ಆರೋಪಿ ಫಯಾಜ್ ಡಿಎನ್ ಎ ಪರೀಕ್ಷೆ ನಡೆಸಲು ಸೂಚಿಸಿತ್ತು. ಈ ಹಿನ್ನೆಲೆಯಲ್ಲಿ 1ನೇ ಜೆ ಎಂಎಫ್ ಸಿ ನ್ಯಾಯಾಲಯದ ನ್ಯಾಯಾಧೀಶರ ಸಮ್ಮುಖದಲ್ಲಿಯೇ ಆರೋಪಿ ಫಯಾಜ್ ನ ರಕ್ತದ ಮಾದರಿಯನ್ನು ವೈದ್ಯರು ಸಂಗ್ರಹಿಸಿದ್ದಾರೆ.ಕೊಲೆ ನಡೆದ ಸ್ಥಳ, ಚಾಕುವಿಗೆ ತಗುಲಿದ್ದ 2 ಮಾದರಿಯ ರಕ್ತದ ಗುರುತು, ಎರಡು ರಕ್ತದ ಮಾದರಿ ಯಾರದೆಂದು ಪರೀಕ್ಷಿಸಲು ಡಿಎನ್ ಎ ಟೆಸ್ಟ್ ಮಾಡುವ ನಿಟ್ಟಿನಲ್ಲಿ ಹಾಗೂ ಇತರ ಆಯಾಮಗಳಲ್ಲಿಯೂ ತನಿಖೆ ನಡೆಸುವ ದೃಷ್ಟಿಯಲ್ಲಿ ರಕ್ತದ ಮಾದರಿ ಸಂಗ್ರಹಿಸಲಾಗಿದೆ.

### ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ 'ಎಫ್ ಐಆರ್' ದಾಖಲು



ಕಲಬುರಗಿ: ನೀತಿ ಸಂಹಿತೆ ಉಲ್ಲಂಘನೆ ಹಿನ್ನೆಲೆಯಲ್ಲಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ವಿರುದ್ಧ ಮತ್ತೊಂದು ಎಫ್ ಐಆರ್ ದಾಖಲಾಗಿದೆ.

ನೀತಿ ಸಂಹಿತೆ ಉಲ್ಲಂಘನೆ ಆರೋಪದ ಹಿನ್ನೆಲೆಯಲ್ಲಿ ಕಲಬುರಗಿ ರೋಜಾ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿದೆ. ಚುನಾವಣಾಧಿಕಾರಿಗಳು ನೀಡಿದ ದೂರಿನ್ವಯ ಎಫ್ ಐಆರ್ ದಾಖಲಾಗಿದೆ. ಕಲಬುರಗಿಯ ಗಂಜ್ ಕಾಲೋನಿಯಲ್ಲಿ ನಡೆದ ಬಿಜೆಪಿ ಸಾರ್ವಜನಿಕ ಸಭೆಯಲ್ಲಿ ಬಸನಗೌಡ ಪಾಟೀಲ್ ಯತ್ನಾಳ್ ನೀತಿ ಸಂಹಿತೆ ಉಲ್ಲಂಘನೆ ಮಾಡಿದ್ದಾರೆ. ನಿಮ್ಮ ಏರಿಯಾಗೆ ಅವರು ಬಂದಾಗ ಕಲ್ಲಿನಿಂದ ಹೊಡೆಯಿರಿ ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ವಿವಾದಾತ್ಮಕ ಹೇಳಿಕೆ ಹಿನ್ನೆಲೆಯಲ್ಲಿ ಚುನಾವಾಣಾಧಿಕಾರಿಗಳು ದೂರು ದಾಖಲಿಸಿದ್ದಾರೆ.

### ಬೆಳಗಾವಿ: ಹಣಕಾಸು ವಿಷಯಕ್ಕೆ 3 ವರ್ಷದ ಮಗು ಬಲಿ



ಬೆಳಗಾವಿ: ಎರಡು ಕುಡುಂಬಗಳ ಜಗಳದಲ್ಲಿ ಮಗವೊಂದು ಬಲಿಯಾಗಿರುವ ಘಟನೆ ಜಿಲ್ಲೆಯ ಅಥಣಿ ತಾಲೂಕಿನ ಬರ್ಲಟ್ಟಿ ಗ್ರಾಮದಲ್ಲಿ ನಡೆದಿದೆ.

ಶ್ರೀನಿಧಿ ಕಾಡಪ್ಪ ಪಾಟೀಲ(3) ಮೃತ ದುರ್ದೈವಿ. ಝೋತಿಭಾ ತುಕಾರಾಮ ಬಾಬಾಬರ ಕೊಲೆ ಮಾಡಿದ ಆರೋಪಿ. ಹಣಕಾಸಿನ ವಿಚಾರದಲ್ಲಿ ಎರಡು ಕುಟುಂಬಗಳ ನಡುವೆ ಜಗಳ ನಡೆದಿದೆ. ಈ ವೇಳೆ ಜಗಳ ತಾರಕ್ಕೇರಿ ಜೋತಿಭಾ ರುಕಾರಮ ಬಾಬಬರ ಮಗುವಿನ ಎದೆ ಮೇಲೆ ಕಾಲಿಟ್ಟು ಕೊಂದಿದ್ದಾರೆ ಎಂದು ಮೃತ ಮಗುವಿನ ಕುಟುಂಬಸ್ಥರು ಆರೋಪಿಸಿದ್ದಾರೆ. ವಿಷಯ ತಿಳಿಯುತ್ತಿದಂತೆ ಸ್ಥಳಕ್ಕೆ ಐಗಳಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷಾಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ. ಈ ಕುರಿತು ಐಗಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಲ್ಪ ಪ್ರಮಾಣದ ಹಣ ಕೊಟ್ಟು ಮಲತಾಯಿ ಧೋರಣೆ ಮಾಡಿದ ಕೇಂದ್ರ ಸರ್ಕಾರ: ಕೃಷ್ಣ ಬೈರೇಗೌಡ



ಬೆಂಗಳೂರು: ನಾವು 18,000 ಕೋಟಿಗೆ ಮನವಿ ಸಲ್ಲಿಸಿದ್ದೆವು. ಸಮಸ್ಯೆ ಗಂಭೀರವಾಗಿರುವ ಆಧಾರದ ಮೇಲೆ ಪರಿಹಾರ ಕೇಳಿದ್ದೆವು. ಈಗ 3,400 ಕೋಟಿಯಷ್ಟು ಹಣ ಕೊಟ್ಟಿದ್ದಾರೆ. ಅಲ್ಪ ಪ್ರಮಾಣದ ಹಣ ಕೊಟ್ಟು ಮಲತಾಯಿ ಧೋರಣೆ ಮಾಡಿದ್ದಾರೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಕೇಂದ್ರದ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ.

ಕೇಂದ್ರದಿಂದ ಬರ ಪರಿಹಾರ ಬಿಡುಗಡೆ ವಿಚಾರವಾಗಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರ ಪರಿಹಾರ ಬಿಡುಗಡೆ ಪತ್ರ ಸಾಮಾಜಿಕ ಜಾಲತಾಣದಲ್ಲಿ ಓಡಾಡುತ್ತಿದೆ. ಕೇಂದ್ರ ಸರ್ಕಾರದ ಜೊತೆ ಮಾತುಕತೆ ಮಾಡಿದ್ದೇವೆ. ಆದ–'ರೆ ಯಾವುದೇ ಅಧಿಕೃತ ದೃಢೀಕರಣ ಆಗಿಲ್ಲ. ನಾವು ಅಧಿಕೃತ ಆದೇಶದ ನಿರೀಕ್ಷೇಯಲ್ಲಿದ್ದೇವೆ ಎಂದರು. ಇದನ್ನೂ ಓದಿ: ಕರ್ನಾಟಕಕ್ಕೆ 3,454 ಕೋಟಿ ರೂ. ಬರ ಪರಿಹಾರ ಘೋಷಿಸಿದ ಕೇಂದ್ರ

ಅವರ ಬಳಿ ಸಮಯ ಇದ್ದಾಗ ರಾಜ್ಯಕ್ಕೆ ಪರ ಪರಿಹಾರ ಬಿಡುಗಡೆ ಅವಕಾಶ ತೆಗೆದುಕೊಂಡಿಲ್ಲ. ನಾಲ್ಕು ತಿಂಗಳು ನಾವು ನೀಡಿದ ಪತ್ರದ ಮೇಲೆ ಕೂತಿದ್ದರು. ಕರ್ನಾಟಕದ ಹಕ್ಕಿಗೆ ಯಾವುದೇ ಬೆಲೆಯನ್ನೂ ಕೊಡಲಿಲ್ಲ. ಅವರ ಕೈಯಲ್ಲಿ ತೀರ್ಮಾನ ಇದ್ದಾಗ ರಾಜ್ಯಕ್ಕೆ ಕೊಡಬಾರದು ಅನ್ನೋ ಧೋರಣೆ ಹೊಂದಿದ್ದರು. ವಿಪತ್ತು ನಿರ್ವಹಣಾ ಕಾಯ್ದೆ 2005ರಡಿ ಹಣ ಬಿಡುಗಡೆ ಮಾಡಬೇಕಿತ್ತು. ಬಿಡುಗಡೆ ಮಾಡದ ಕಾರಣ ನಾವು ಕೇಂದ್ರದ ವಿರುದ್ಧ ಕೋರ್ಟ್ ಮೆಟ್ಟಿಲೇರುವ ಅವಶ್ಯಕತೆ ಎದುರಾಯಿತು. ಕೋರ್ಟ್‌ನಲ್ಲಿ ಎರಡು ಬಾರಿ ಹಿಯರಿಂಗ್ ಆಗಿದೆ. ನಾವು ಕೊಟ್ಟಿರುವುದಕ್ಕೆ ಎಲ್ಲವೂ ಸರಿ ಇದೆ, ಕ್ರಮಬದ್ಧವಾಗಿತ್ತು. ಅದಕ್ಕೆ ಹೆಚ್ಚು ಚರ್ಚೆ ಆಗಲಿಲ್ಲ. ವಾದ ಬೇಡ ಅಂತ ಕೇಂದ್ರದ ಪರ ವಕೀಲರು ಮನವಿ ಮಾಡಿದ್ದಾರೆ ಎಂದು ತಿಳಿಸಿದರು.

ನಾವು ಸೆಪ್ಟೆಂಬರ್‌ನಲ್ಲಿ ಪರಿಹಾರದ ಮನವಿ ಕೊಟ್ಟಿದ್ದೆವು. ಕೇಂದ್ರ ತಂಡ ಬಂದು ಅಧ್ಯಯನ ಮಾಡಿ ಹೋಗಿತ್ತು. ರಾಜ್ಯದ ಮನವಿಯನ್ನು ಕೇಂದ್ರ ತಡ ಮಾಡಿತ್ತು.

ಕೇಂದ್ರದ ಸಚಿವರನ್ನು ಭೇಟಿ ಮಾಡಿದರೂ ಬಿಡುಗಡೆ ಮಾಡಿರಲಿಲ್ಲ. ನಾವು ಮನವಿ ಕೊಟ್ಟು ಏಳು ತಿಂಗಳು ಆಗಿತ್ತು. ಕರ್ನಾಟಕದ ಮನವಿಗೆ ಗೌರವ ಕೊಡಲಿಲ್ಲ. ಅದಕ್ಕಾಗಿ ನಾವು ಸುಪ್ರೀಂ ಕೋರ್ಟ್ ಮೆಟ್ಟಿಲು ಹತ್ತಿದೆವು. ಕಾನೂನಿನ ಹೋರಾಟ ಮಾಡಬೇಕಾಯಿತು. ರಾಜ್ಯದ ಮನವಿಯನ್ನು ಕೋರ್ಟ್ ಪ್ರಶ್ನೆ ಮಾಡಲಿಲ್ಲ. ನಾವು ಸಮಯಕ್ಕೆ ಸರಿಯಾಗಿ ಎಲ್ಲಾ ಮನವಿ ಮಾಡಿದೆವು.

ಕೇಂದ್ರದ ವಕೀಲರು ಮನವಿ ಮಾಡಿದರು. ನಾವು ನಿರ್ಧಾರ ಮಾಡಲು ಸಮಯ ಬೇಕು ಎಂದಿದ್ದರು. ನಮಗೆ ಹೋರಾಟದ ಮೂಲಕ ಬರ ಪರಿಹಾರ ಹಣ ಬಂದಿದೆ. ನಮಗೆ ಕಾನೂನು ಬದ್ಧವಾಗಿ ಬಂದಿರುವ ಹಣ ಇದು ಎಂದು ಹೇಳಿದರು.

## ಕ್ಷೇತ್ರದ ಸಮಸ್ಯೆಗಳ ಅನಾವರಣ ಮಾಡಿ: ದೇಶಪಾಂಡೆ ಒತ್ತಾಯ



ಶಿರಸಿ: 'ಆರು ಬಾರಿ ಬಿಜೆಪಿ ಸಂಸದರ ಅಧಿಕಾರದಲ್ಲಿದ್ದರೂ ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಲ್ಲಿನ ಹಲವು ಜ್ವಲಂತ ಸಮಸ್ಯೆಗಳು ಇಂದಿಗೂ ಜೀವಂತವಾಗಿವೆ. ಅವುಗಳ ಬಗ್ಗೆ ಹಾಲಿ ಬಿಜೆಪಿ ಅಭ್ಯರ್ಥಿ ವಿಶ್ವೇಶ್ವರ ಹೆಗಡೆ ಕಾಗೇರಿ ಪ್ರಧಾನಿ ಗಮನಕ್ಕೆ ತರಬೇಕು' ಎಂದು ಕರ್ನಾಟಕ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್ವಿ.ದೇಶಪಾಂಡೆ ಒತ್ತಾಯಿಸಿದರು.

ನಗರದಲ್ಲಿ ಶನಿವಾರ ಪತ್ರಕರ್ತರ ಜತೆ ಮಾತನಾಡಿದ ಅವರು, 'ಲೋಕಸಭಾ ಕ್ಷೇತ್ರ ಈವರೆಗೆ ಬಿಜೆಪಿಯ ಅಧಿಕಾರದಲ್ಲಿದೆ. ಆದರೂ ಇಲ್ಲಿನ ಸಮಸ್ಯೆಗಳಿಗೆ ಮುಕ್ತಿ ಸಿಕ್ಕಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಈ ಬಗ್ಗೆ ಗಮನ ಸೆಳೆಯುವ ಕಾರ್ಯವನ್ನು ಕಾಗೇರಿ ಅವರು ಮಾಡಬೇಕು. ಇಲ್ಲಿನ ನಿರುದ್ಯೋಗ ಸಮಸ್ಯೆ, ಸಂಪರ್ಕ ತೊಡಕು, ಭೂಮಿ ಹಕ್ಕಿನ ತಾಪತ್ರಯಗಳ ಬಗ್ಗೆ ತಿಳಿವಳಿಕೆ ನೀಡಿ ಪರಿಹಾರ ಸೂಚಿಸಬೇಕು' ಎಂದರು.

ಜನಸಂಖ್ಯೆ ಆಧಾರದ ಮೇಲೆ ಮೀಸಲಾತಿ ನೀಡುತ್ತೇವೆ ಎಂದು ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ತಿಳಿಸಿದ್ದೇವೆ. ಆದ–'ರೆ ಬಿಜೆಪಿಗರು ಎಲ್ಲದರಲ್ಲೂ ಹಿಂದುತ್ವದ ಅಜೆಂಡಾ ತೂರಿಸಲು ಯತ್ನಿಸುತ್ತಾರೆ. ಇದು ಬಿಜೆಪಿಯ ಮನಸ್ಥಿತಿಯಾಗಿದೆ. ಕಾಂಗ್ರೆಸ್ ಸಾಮಾಜಿಕ ನ್ಯಾಯ ನೀಡುವ ಮಾತನಾಡಿದೆಯೇ ವಿನಾ ಧರ್ಮ, ಜಾತಿಗಳ ಒಡೆದಾಳುವ ಉದ್ದೇಶ ಹೊಂದಿಲ್ಲ ಎಂದ ಅವರು, ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಾ.ಅಂಜಲಿ ನಿಂಬಾಳ್ಕರ್ ಗೆಲುವು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ವೇಳೆ ಶಾಸಕ ಭೀಮಣ್ಣ ನಾಯ್ಕ, ಪ್ರಮುಖರಾದ ವೆಂಕಟೇಶ ಹೆಗಡೆ ಇತರರಿದ್ದರು.

## ಬೆನಕನಹಳ್ಳಿಯಲ್ಲಿ ಜಗದೀಶ ಶೆಟ್ಟರ್ ಗೆ ಅದ್ಧೂರಿ ಸ್ವಾಗತ ಕೋರಿದ ಜನತೆ



ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಬೆನಕನಹಳ್ಳಿಯ ಶ್ರೀ ಲಕ್ಷ್ಮೀ ದೇವಿ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ ಜಗದೀಶ ಶೆಟ್ಟರ್ ಅವರು ಲಕ್ಷ್ಮೀ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ಶನಿವಾರ ಬೆಳಗ್ಗೆ ಬೆನಕನಹಳ್ಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಜಗದೀಶ್ ಶೆಟ್ಟರ್ ಅವರಿಗೆ ಸಾರ್ವಜನಿಕರು ಅದ್ಧೂರಿಯಾಗಿ ಸ್ವಾಗತಿಸಿದರು. ಮಹಿಳೆಯರು ಆರತಿ ಬೆಳಗಿ ಆತ್ಮಿಯವಾಗಿ ಬರ ಮಾಡಿಕೊಂಡರು.

ಊರಿನ ಮುಖಂಡರು ಇದೆ ವೇಳೆ ಜಗದೀಶ್ ಶೆಟ್ಟರ್ ಅವರಿಗೆ ಸನ್ಮಾನ ಮಾಡಿದರು. ಬಳಿಕ ಜಗದೀಶ ಶೆಟ್ಟರ್ ಅವರು ಲಕ್ಷ್ಮೀ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಸದೆ ಮಂಗಳ ಅಂಗಡಿ, ಮಾಜಿ ಶಾಸಕರಾದ ಮನೋಜ ಕಡೋಳಕರ್, ಪ್ರಮುಖರಾದ ನಾಗೇಶ ಮನ್ನೋಳಕರ, ಡಾ. ರಾಜು ಪಾಟೀಲ, ಡಾ. ಯಲ್ಲಪ್ಪ ಪಾಟೀಲ, ಪರಶುರಾಮ ಪಾಟೀಲ್, ಬುದ್ದಾಜೀ ಪಾಟೀಲ್, ಬಿಜೆಪಿ ಮಂಡಲ ಅಧ್ಯಕ್ಷರಾದ ಧನಂಜಯ ಜಾಧವ ಸೇರಿದಂತೆ ಗ್ರಾಮದ ಗುರುಹಿರಿಯರು, ಮಾತೆಯರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಅರೆಬೆಂದ ಊಟ ಸೇವಿಸಿ 24 ವಿದ್ಯಾರ್ಥಿನಿಯರು ಅಸ್ವಸ್ಥ



ರಾಯಚೂರು: ಅರೆಬೆಂದ ಊಟ ಸೇವಿಸಿ ವಿದ್ಯಾರ್ಥಿನಿಯರು ಅಸ್ವಸ್ಥರಾಗಿರುವ ಘಟನೆ ಸಿಂಧನೂರಿನಲ್ಲಿರುವ ಅಂಬೇಡ್ಕರ್ ವಸತಿ ನಿಲಯದಲ್ಲಿ ನಡೆದಿದೆ. ವಿದ್ಯಾರ್ಥಿನಿಯರು ನಿನ್ನೆ ಮಧ್ಯಾಹ್ನ ಊಟ ಸೇವಿಸಿ ಅಸ್ವಸ್ಥರಾಗಿದ್ದಾರೆ.

ಕೂಡಲೆ ವಿದ್ಯಾರ್ಥಿನಿಯರನ್ನು ತಾಲೂಕು ಆಸ್ಪತ್ರೆಗೆ ಕರೆದುಕೊಂಡು ಹೋಗಲಾಗಿದೆ. ಆದರೆ ಆಸ್ಪತ್ರೆಯಲ್ಲಿ ವೈದ್ಯರಿಲ್ಲದೆ ವಿದ್ಯಾರ್ಥಿನಿಯರು 2 ಗಂಟೆ ಕಾಲ ನರಳಾಡಿದ್ದಾರೆ. ಆಸ್ಪತ್ರೆಗೆ ಸಮಾಜ ಕಲ್ಯಾಣ ಉಪನಿರ್ದೇಶಕ ಮಹೇಶ್ ಪೊತೆದಾರ್ ಭೇಟಿ ನೀಡಿದ್ದಾರೆ. ವಸತಿ ನಿಲಯದಲ್ಲಿನ ಊಟದ ಸಮಸ್ಯೆ ಬಗ್ಗೆ ಈ ಹಿಂದೆ ಅಧಿಕಾರಿಗಳ ಗಮನಕ್ಕೆ ತಂದಿದ್ದರು ಪ್ರಯೋಜನವಾಗಿಲ್ಲ.

## ಜೋಶಿ ಸೋಲಿಸೋದೆ ನಮ್ಮ ಗುರಿ: ದಿಂಗಾಲೇಶ್ವರ ಶ್ರೀ



ಹುಬ್ಬಳ್ಳಿ: ಪ್ರಹ್ಲಾದ್ ಜೋಶಿಯಿಂದ ಸ್ವಾಮೀಜಿಗಳಿಗೆ ಪಾಕೆಟ್ ರಾಜಕೀಯ ಮಾಡುತ್ತಿದ್ದು ಈ ಬಗ್ಗೆ ನನ್ನ ಬಳಿ ವಿಡಿಯೋ ಇದೆ ಎಂದು ದಿಂಗಾಲೇಶ್ವರ ಸ್ವಾಮೀಜಿ ಅವರು ಸ್ಫೋಟಕ ಮಾಹಿತಿಯನ್ನು ಹೇಳಿದ್ದಾರೆ.

ಅವರು ಹುಬ್ಬಳ್ಳಿಯಲ್ಲಿ ಮಾತನಾಡುತ್ತ ಈ ಬಗ್ಗೆ ಮಾಹಿತಿ ನೀಡಿದರು.ಇದೇ ವೇಳೆ ಅವರು ಮಾತನಾಡಿ, ಜೋಶಿ ಸೋಲಿಸೋದೆ ನಮ್ಮ ಗುರಿ. ಮಠಗಳ ನಡುವೆ ಜೋಶಿ ಒಡೆದಾಳೋ ನೀತಿ ಅನುಸರಿಸುತ್ತಿದ್ದಾರೆ. ಜೋಶಿ ಅವಲ ಸೋಲು ಖಚಿತ, ಸರ್ವೆಯಲ್ಲಿ ಇದು ಬಹಿರಂಗವಾಗಿದೆ ಎಂದು ಹೇಳಿದರು.

ಇದಲ್ಲದೇ ಚುನಾವಣೆ ಬಂದಾಗ ಮಾತ್ರ ಸ್ವಾಮೀಜಿಗಳು ಬೇಕು. ನನ್ನ ಹಿರಿಯ ಸ್ವಾಮೀಜಿಗಳಿಂದ ನನ್ನ ಮೇಲೆ ಒತ್ತಡ ಹಾಕಿಸಿದರು. ನಮ್ಮ ಹಿರಿಯ ಸ್ವಾಮೀಜಿ ಶಿವಯೋಗಿ ಸಿದ್ದರಾಮ ಮಹಾಸ್ವಾಮಿಗಳನ್ನ ಪದೆ ಪದೇ ಭೇಟಿ ಮಾಡ್ತಿದ್ದಾರೆ. ನಮ್ಮ ಗುರು ಶಿಷ್ಯರುನ್ನು ಅಗಲಿಸೋ ಕೆಲಸ ಮಾಡ್ತಿದ್ದಾರೆ. ನೀವು ನಮ್ಮ ಗುರು ಶಿಷ್ಯರನ್ನು ಅಗಲಿಸಿದ್ರೆ, ನಾವು ನಿಮ್ಮ ದಂಪತಿ ಅಗಲಿಸುತ್ತೇವೆ ಎಂದು ಹೇಳಿದರು.

## ರೈತರ ಸಾಲ ಮನ್ನಾ ಮಾಡಲು ಕೇಂದ್ರದ ಅನುದಾನ ಬೇಕಿಲ್ಲ: ಬಂಡೆಪ್ಪ ಕಾಶೆಂಪುರ



ಬೆಳಗಾವಿ: 'ಲೋಕಸಭಾ ಚುನಾವಣೆ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪ್ರಕಟಿಸಿದ 25 ಗ್ಯಾರಂಟಿಗಳಲ್ಲಿ 'ರೈತರ ಸಾಲ ಮನ್ನಾ' ಕೂಡ ಸೇರಿಸಲಾಗಿದೆ. ನಿಮಗೆ ನಿಜವಾಗಿ ರೈತರ ಬಗ್ಗೆ ಕಾಳಜಿ ಇದ್ದರೆ, ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ ಚುನಾವಣೆಗೆ ಮುನ್ನ ರೈತರ ಸಾಲ ಮನ್ನಾ ಮಾಡಬಹುದಿತ್ತು ಅಲ್ಲವೇ?' ಎಂದು ಜೆಡಿಎಸ್ ರಾಷ್ಟ್ರೀಯ ಕೋರ್ ಸಮಿತಿ ಸದಸ್ಯ ಬಂಡೆಪ್ಪ ಕಾಶೆಂಪುರ ಟೀಕಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು, 'ಎಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ವೇಳೆ, ರೈತರ ಸಾಲ ಮನ್ನಾ ಮಾಡಿದ್ದರು. ರಾಜ್ಯ ಸರ್ಕಾರವೂ ಕೇಂದ್ರದ ಅನುದಾನಕ್ಕಾಗಿ ಕಾಯಬೇಕಿಲ್ಲ. ಪಂಚ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿದ ಕಾಂಗ್ರೆಸ್‌ನವರು ರೈತರ ಕಲ್ಯಾಣಕ್ಕಾಗಿ ಏನು ಕೊಡುಗೆ ನೀಡಿದ್ದೀರಿ. ನಿಮ್ಮ ನಂಬಿ ಮತ ಹಾಕಿದ ಬಡವರು ಈಗ ಪರಿತಪಿಸುತ್ತಿದ್ದಾರೆ' ಎಂದು ದೂರಿದರು.

'ಕಳೆದ ಒಂದು ವರ್ಷದಿಂದ ರಾಜ್ಯದಲ್ಲಿ ಅಭಿವೃದ್ಧಿ ಕೆಲಸ ಸ್ಥಗಿತಗೊಂಡಿವೆ. ಅಭಿವೃದ್ಧಿ ಕೆಲಸ ಕೈಗೊಳ್ಳಲು ಶಾಸಕರಿಗೂ ಅನುದಾನ ಸಿಗುತ್ತಿಲ್ಲ. ಗ್ಯಾರಂಟಿ ಯೋಜನೆಗಳ ಜಾರಿಗೆ ರಾಜ್ಯ ಸರ್ಕಾರ ಮಾಡಿದ ರೂ 1 ಲಕ್ಷ ಕೋಟಿ ಸಾಲದ ಹೊರೆ ಯಾರ ಮೇಲೆ ಹೊರಿಸಬೇಕು ಎಂದುಕೊಂಡಿದ್ದೀರಿ' ಎಂದು ಪ್ರಶ್ನಿಸಿದರು.

'ಗ್ಯಾರಂಟಿ ಯೋಜನೆಗಳನ್ನು ನಂಬಿ ಇಷ್ಟುದಿನ ಪ್ರಚಾರ ಮಾಡುತ್ತಿದ್ದ ಕಾಂಗ್ರೆಸ್ ಮುಖಂಡರಿಗೂ ಈಗ ತಮ್ಮ ಸರ್ಕಾರದ ಯೋಜನೆಗಳ ಬಗ್ಗೆ ವಿಶ್ವಾಸ ಇಲ್ಲದಂತಾಗಿದೆ.

## ಉತ್ತರ ಪ್ರದೇಶ: ಉತ್ತರ ಪತ್ರಿಕೆಯಲ್ಲಿ ಜೈ ಶ್ರೀರಾಮ್ ಘೋಷಣೆ ಬರೆದು ಉತ್ತೀರ್ಣರಾದ ವಿದ್ಯಾರ್ಥಿಗಳು

ಉತ್ತರ ಪ್ರದೇಶದ ಜೌನ್ ಪುರ ಸರ್ಕಾರಿ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳಲ್ಲಿ ಜೈ ಶ್ರೀರಾಮ್ ಘೋಷಣೆ, ಭಾರತೀಯ ಕ್ರಿಕೆಟಿಗರ ಹೆಸರುಗಳನ್ನು ಬರೆದಿದ್ದು ಉತ್ತೀರ್ಣರಾಗಿದ್ದಾರೆ.

ಆರ್ ಟಿಐ ನಲ್ಲಿ ಈ ಮಾಹಿತಿ ಬಹಿರಂಗವಾಗಿದ್ದು, ಈ ರೀತಿ ಬರೆದ ನಾಲ್ವರು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಈ ಮಾಹಿತಿ ಬಹಿರಂಗವಾದ ಬೆನ್ನಲ್ಲೇ ನಾಲ್ವರು ಪ್ರೊಫೆಸರ್ ಗಳನ್ನು ಅಮಾನತುಗೊಳಿಸಲಾಗಿದೆ.

ವೀರ್ ಬಹದ್ದೂರ್ ಸಿಂಗ್ ಪೂರ್ವಾಂಚಲ ವಿವಿಯ ಉಪಕುಲಪತಿ ಡಾ. ವಂದನಾ ಸಿಂಗ್ ಮಾತನಾಡಿ ಈ ವಿಷಯವಾಗಿ ಸಭೆಯನ್ನು ಕರೆಯಲಾಗಿತ್ತು. ಇಬ್ಬರು ಪ್ರಾಧ್ಯಾಪಕರಾದ ಡಾ. ಅಶುತೋಷ್ ಗುಪ್ತಾ ಹಾಗೂ ಡಾ. ವಿನಯ್ ವರ್ಮಾ ತಪ್ಪು ಮೌಲ್ಯಮಾಪನ ಮಾಡಿದ್ದು ದೃಢಪಟ್ಟಿದೆ ಎಂದು ಹೇಳಿದ್ದಾರೆ.

# ಇಂದು ಉಗಾರದಲ್ಲಿ ಕಾಂಗ್ರೆಸ್ ಸಮಾವೇಶ: ಬೃಹತ್ ಟೆಂಟ್–ಹೆಲಿಪ್ಯಾಡ್ ಪರಿಶೀಲಿಸಿದ ಸಚಿವ ಸತೀಶ್ ಜಾರಕಿಹೊಳಿ



ಕಾಗವಾಡ: ನಾಳೆ ಉಗಾರ ಖುರ್ದನಲ್ಲಿ ನಡೆಯುವ ಕಾಂಗ್ರೆಸ್ ಪಕ್ಷದ ಸಮಾವೇಶದಲ್ಲಿ ಕಾಗವಾಡ, ರಾಯಬಾಗ, ಕುಡಚಿ, ಅಥಣಿ ಮತಕ್ಷೇತ್ರದ ಕಾರ್ಯಕರ್ತರು ಪಾಲ್ಗೊಳ್ಳತ್ತಿದ್ದು, ಸಿಎಂ ಸಿದ್ದರಾಮಯ್ಯನವರು ಆಗಮಿಸುತ್ತಿದ್ದಾರೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಕಾಗವಾಡ ತಾಲೂಕಿನ ಉಗಾರ ಖುರ್ದನ ಶ್ರೀ ಹರಿ ಮಹಾವಿದ್ಯಾಲಯ ಆವರಣದಲ್ಲಿ ನಿರ್ಮಿಸಿದ ಬೃಹತ್ ಟೆಂಟ್, ಸಿದ್ಧತೆಗಳನ್ನು ಪರಿಶೀಲಿಸಿದ ಬಳಿಕ ಅವರು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾಳೆ ಐತಿಹಾಸಿಕ ಕಾರ್ಯಕ್ರಮ ಉಗಾರದಲ್ಲಿ ನಡೆಯುತ್ತಿದೆ. ನಾವು ಕಳೆದ 30 ವರ್ಷಗಳಿಂದ ಮಾಡಿದ ಅಭಿವೃದ್ಧಿ ಕೆಲಸಗಳನ್ನೆ ಇಟ್ಟುಕೊಂಡು ಚುನಾವಣೆ ಎದುರಿಸುತ್ತೇವೆ. ಕಾಂಗ್ರೆಸ್ ಪಕ್ಷ 2013ರಲ್ಲಿ ಅಧಿಕಾರಕ್ಕೆ ಬರುವುದಕ್ಕಿಂತ ಮುಂಚೆ ಪ್ರಣಾಳಿಕೆಯಲ್ಲಿ 165 ಭರವಸೆಗಳನ್ನು ನೀಡಿತು 158 ಭರವಸೆಗಳನ್ನು ಈಡೇ–ರಿಸಿದೆ. ಅನ್ನಭಾಗ್ಯ, ಕ್ಷೀರಭಾಗ್ಯ, ಶೂ ಭಾಗ್ಯ, ರೈತರ ಸಾಲ ಮನ್ನಾ, ಇಂದಿರಾ ಕ್ಯಾಂಟೀನ್ ಹಾಗೂ ವಿದ್ಯಾಸಿರಿ ಯೋಜನೆಗಳನ್ನು ಈಡೇರಿಸಿದೆ ಎಂದರು.

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಒಂಬತ್ತು ತಿಂಗಳ ಒಳಗೆ ಐದು ಗ್ಯಾರಂಟಿ ಯೋಜನೆಗಳನ್ನು ಈಡೇ–ರಿಸಿದೆ. ಪ್ರತಿಯೊಂದು ಕುಟುಂಬಗಳಿಗೆ ನಾಲ್ಕರಿಂದ ಐದು ಸಾವಿರ ಹಣ ಉಳಿತಾಯವಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿಯೊಂದು ಮನೆಯ ಗೃಹಿಣಿಯರು 2000 ಪಡೆದುಕೊಳ್ಳುತ್ತಿದ್ದಾರೆ. ವಿಧ್ಯುತ್ ಅನ್ನು ಉಚಿತವಾಗಿ ಪಡೆದುಕೊಳ್ಳುತ್ತಿದ್ದಾರೆ. ಶಕ್ತಿ ಯೋಜನೆಯಡಿ ಉಚಿತವಾಗಿ ಮಹಿಳೆಯರು ಪ್ರಯಾಣ ಮಾಡುತ್ತಿದ್ದಾರೆ. ಅನ್ನಭಾಗ್ಯದಲ್ಲಿ 5 ಕೆಜಿ ಅಕ್ಕಿ 5 ಕೆ.ಜಿ ಗೆ ಹಣವನ್ನು ಪಡೆಯುತ್ತಿದ್ದಾರೆ. ಆದ್ದರಿಂದ ಈ ಭಾರಿ ಲೋಕಸಭೆ ಚುನಾವಣೆಯಲ್ಲಿ ಗ್ಯಾರಂಟಿ ಯೋಜನೆಗಳು ಕಂಡಿತವಾಗಿ ಪರಿಣಾಮ ಬೀರುತ್ತವೆ. ಅದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ತಿಳಿಸಿದರು.

ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ 18 ಜನ ಸ್ಪರ್ಧೆಯಲ್ಲಿ ಇದ್ದಾರೆ. ಅದರಲ್ಲಿ ಎರಡು ಜನ ಮಾತ್ರ ರಾಷ್ಟ್ರೀಯ ಪಕ್ಷಗಳಿಂದ ಸ್ಪರ್ಧಿಸಿದ್ದಾರೆ. ಇನ್ನು ಸ್ವಾತಂತ್ರ್ಯ ಅಭ್ಯರ್ಥಿಗಳ ಸ್ಪರ್ಧೆ ಬಗ್ಗೆ ಚರ್ಚಿಸುವ ಅವಶಕತೆ ನಮಗಿಲ್ಲ ಎಂದರು.

ಹೆಲಿಪ್ಯಾಡ್ ಸ್ಥಳ ಪರಿಶೀಲಿಸಿದ ಸಚಿವ: ಸಿಎಂ ಸಿದ್ದರಾಮಯ್ಯ ಆಗಮನ ಹಿನ್ನೆಲೆಯಲ್ಲಿ ಮಂಗಸೂಳಿ ಲಕ್ಷ್ಮೀ ನಗರದಲ್ಲಿ ನಿರ್ಮಿಸಿದ ಹೆಲಿಪ್ಯಾಡ್ ಅನ್ನು ಸಚಿವ ಸತೀಶ್ ಜಾರಕಿಹೊಳಿ ಅವರು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಶಾಸಕ ರಾಜು ಕಾಗೆ, ಕಾಂಗ್ರೆಸ್ ಮುಖಂಡರಾದ ರಮೇಶ ಸಿಂದಗಿ, ಅಬಿಬ್ ಶಿಲ್ಲೇದಾರ್, ದಿಗ್ವಿ–ಜಯ ಪವಾರ್, ರಾವಸಾಬ್ ಐಹೊಳೆ ಸೇರಿದಂತೆ ಹಲವರು ಇದ್ದರು.

## 'ಉ.ಕ'ದಲ್ಲಿ ಕಾಂಗ್ರೆಸ್–ಬಿಜೆಪಿ ಅಲರ್ಟ: 13 ಸಚಿವರಿಗೆ ಟಾಸ್ಕ್



ಬೆಂಗಳೂರು: ಕರ್ನಾಟಕದಲ್ಲಿ ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನ ಮುಕ್ತಾಯವಾಗಿದೆ. ಇದುವರೆಗೆ ದಕ್ಷಿಣ ಕರ್ನಾಟಕ ಭಾಗದಲ್ಲಿಯೇ ಬೀಡುಬಿಟ್ಟಿದ್ದ ರಾಜಕೀಯ ಪಕ್ಷಗಳ ನಾಯಕರು ಈಗ ಉತ್ತರ ಕರ್ನಾಟಕದ ಕಡೆ ತೆರಳುತ್ತಿದ್ದಾರೆ.

ಇನ್ನು, ಉತ್ತರ ಕರ್ನಾಟಕ ಭಾಗದಲ್ಲಿ ಹೆಚ್ಚು ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವ ದಿಸೆಯಲ್ಲಿ ಕಾಂಗ್ರೆಸ್ ಅಲರ್ಟ್ ಆಗಿದ್ದು, ಹೆಚ್ಚುವರಿಯಾಗಿ 13 ಕ್ಷೇತ್ರಗಳಿಗೆ ಸಚಿವರಿಗೆ ಜವಾಬ್ದಾರಿ ನೀಡಿದೆ. ಬಿಜೆಪಿ ನಾಯಕರು ಕೂಡ ಉತ್ತರ ಕರ್ನಾಟಕದಲ್ಲೇ ಮೊಕ್ಕಾ ಹೂಡಿದ್ದಾರೆ.

13 ಸಚಿವರಿಗೆ ಕಾಂಗ್ರೆಸ್ ಟಾಸ್ಕ್: ಉತ್ತರ ಕರ್ನಾಟಕ ಭಾಗದಲ್ಲಿ ಹೆಚ್ಚು ಕ್ಷೇತ್ರಗಳನ್ನು ಗೆಲ್ಲಲು ಪಣ ತೊಟ್ಟಿರುವ ರಾಜ್ಯ ಕಾಂಗ್ರೆಸ್, 13 ಸಚಿವರಿಗೆ 13 ಕ್ಷೇತ್ರಗಳನ್ನು ಹೆಚ್ಚುವರಿಯಾಗಿ ಜವಾಬ್ದಾರಿ ನೀಡಿದೆ. ಹೆಚ್ಚುವರಿ ಉಸ್ತುವಾರಿಗಳನ್ನು ನೇಮಕ ಮಾಡಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು ಆದೇಶಿಸಿದ್ದಾರೆ. ಆ ಮೂಲಕ ಕಾಂಗ್ರೆಸ್ ನಾಯಕರನ್ನು ಸದ್ಬಳಕೆ ಮಾಡಿಕೊಂಡು ಬಿಜೆಪಿಗೆ ತಿರುಗೇಟು ನೀಡುವುದು ಕಾಂಗ್ರೆಸ್ ತಂತ್ರವಾಗಿದೆ.

**ಕ್ಷೇತ್ರವಾರು ಜವಾಬ್ದಾರಿ ಹಂಚಿಕೆ ಹೀಗಿದೆ**

ದಾವಣಗೆರೆ ಡಾ.ಜಿ. ಪರಮೇಶ್ವರ್
ಧಾರವಾಡ ದಿನೇಶ್ ಗುಂಡೂರಾವ್
ಕೆ.ಜೆ. ಜಾರ್ಜ್ ಉತ್ತರ ಕನ್ನಡ
ಚಿಕ್ಕೋಡಿ ಕೆ.ಎಚ್.ಮುನಿಯಪ್ಪ
ಹಾವೇರಿ ಕೃಷ್ಣ ಭೈರೇಗೌಡ
ಬಳ್ಳಾರಿ ರಾಮಲಿಂಗಾರೆಡ್ಡಿ
ಬೆಳಗಾವಿ ಬೈರತಿ ಸುರೇಶ್
ಕೊಪ್ಪಳ ಎಂ.ಸಿ. ಸುಧಾಕರ್
ರಾಯಚೂರು ಕೆ.ಎನ್.ರಾಜಣ್ಣ
ಬೀದರ್ ಕೆ. ವೆಂಕಟೇಶ್
ಶಿವಮೊಗ್ಗ ಎನ್. ಚೆಲುವರಾಯಸ್ವಾಮಿ
ವಿಜಯಪುರ ಎಚ್.ಸಿ.ಮಹಾದೇವಪ್ಪ
ಬಾಗಲಕೋಟೆ ಡಿ. ಸುಧಾಕರ್

ಕಲಬುರಗಿಗೆ ತೆರಳಿದ ಸಿದ್ದರಾಮಯ್ಯ ಮೊದಲ ಹಂತದ ಮತದಾನ ಮುಗಿದ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉತ್ತರ ಕರ್ನಾಟಕಕ್ಕೆ ತೆರಳಿದ್ದಾರೆ. ಸದ್ಯ, ಕಲಬುರಗಿಯಲ್ಲಿರುವ ಸಿದ್ದರಾಮಯ್ಯ ಬಳಿಕ ಇಂದೇ ತೇರದಾಳ, ರಬಕವಿ ಬನಹಟ್ಟಿಗೆ ತೆರಳಿ ಪ್ರಚಾರ ನಡೆಸಲಿದ್ದಾರೆ.

ಬಾಗಲಕೋಟೆಯಲ್ಲಿ ಸಂಯುಕ್ತಾ ಪಾಟೀಲ್ ಅವರ ಪರ ಪ್ರಚಾರ ನಡೆಸಲಿರುವ ಸಿದ್ದರಾಮಯ್ಯ ಅವರು ಪ್ರಮುಖ ಕ್ಷೇತ್ರಗಳಲ್ಲಿ ಪ್ರಚಾರ ಮಾಡಲಿದ್ದಾರೆ ಎಂದು ತಿಳಿದುಬಂದಿದೆ.

## ತರಕಾರಿ ಮಾರುಕಟ್ಟೆಯಲ್ಲಿ ಚಾಯ್ ಪೆ ಚರ್ಚಾ ಮೂಲಕ ಮತ ಯಾಚನೆ ಮಾಡಿದ ಜಗದೀಶ್ ಶೆಟ್ಟರ್



ಬೆಳಗಾವಿ: ಚುನಾವಣೆಗೆ ಕೆಲವು ದಿನಗಳು ಬಾಕಿ ಉಳಿದಿದ್ದು, ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರಿಗೆ ಹೊದಲೆಲ್ಲ ಜನ ಆತ್ಮಿಯವಾಗಿ ಸ್ವಾಗತಿಸಿ ಬೆಂಬಲ ನೀಡುತ್ತಿದ್ದಾರೆ. ಇಂದು ಬೆಳ್ಳಂ ಬೆಳಗ್ಗ ಪ್ರಚಾರ ಆರಂಭಿಸಿದ ಜಗದೀಶ್ ಶೆಟ್ಟರ್ ಅವರಿಗೆ ಜನರು ಬೆಂಬಲ ನೀಡಿದ್ದಾರೆ.

ಪ್ರತಿ ನಿತ್ಯ ಜಗದೀಶ್ ಶೆಟ್ಟರ್ ಅವರು ಚಾಯ್ ಪೆ ಚರ್ಚಾ ಕಾರ್ಯಕ್ರಮದ ಮೂಲಕ ಮತಯಾಚನೆ ನಡೆಸುತ್ತಿದ್ದಾರೆ. ಶನಿವಾರ ಬೆಳಗ್ಗೆ ಗಾಂಧಿ ನಗರದ ತರಕಾರಿ ಮಾರುಕಟ್ಟೆಯಲ್ಲಿ ಚಾಯ್ ಪೇ ಚರ್ಚಾ ಕಾರ್ಯಕ್ರಮದ ಮೂಲಕ ವ್ಯಾಪಾರಸ್ಥರು, ರೈತರು ಹಾಗೂ ಸಾರ್ವಜನಿಕರನ್ನು ಭೇಟಿ ಮಾಡಿ, ಮತಯಾಚನೆ ಮಾಡಿದ್ದಾರೆ.

ಮತಯಾಚನೆ ಮಾಡುವ ಮೂಲಕ ಜಗದೀಶ್ ಶೆಟ್ಟರ್ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ಬೀದಿ ಬದಿಯ ವ್ಯಾಪಾ–ರಿಗಳಿಗೆ ಜಾರಿಗೆ ತಂದ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿದ್ದಾರೆ. ಹಾಗಾಗಿ ದೇಶವನ್ನು ಹೆಚ್ಚು ಹೆಚ್ಚು ಅಭಿವೃದ್ಧಿ ಪಡಿಸಲು ಬಿಜೆಪಿಗೆ ಮತ ನೀಡಿ ನನ್ನನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಅನಿಲ ಬೆನಕೆ, ಜೈ ಕಿಸಾನ್ ವೆಜಿಟೆಬಲ್ ಮಾರ್ಕೆಟ್ ಅಧ್ಯಕ್ಷರಾದ ದೀವಾಕರ ಪಾಟೀಲ್, ಉಪಾಧ್ಯಕ್ಷರಾದ ಮೋಹನ ಮನ್ನೋಳಕರ, ಕಾರ್ಯದರ್ಶಿ ಎ.ಕೆ. ಬಗವಾನ್, ಪ್ರಮುಖರಾದ ಡಾ. ರವಿ ಪಾಟೀಲ್, ವಿಶ್ವನಾಥ ಪಾಟೀಲ್, ಎಂ.ಎಂ. ದೋಣಿ, ಉಮೇಶ ಪಾಟೀಲ, ಕುಲದೀಪ್ ತಹಶೀಲ್ದಾರ, ಪಿ.ಬಿ. ಬಾಬಣ್ಣವರ, ಲಕ್ಷ್ಮಣ ಅಂಬೋಜಿ ಸೇರಿದಂತೆ ವ್ಯಾಪಾರಸ್ಥರು, ರೈತರು, ಪಕ್ಷದ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಕೇಂದ್ರದ ವಿರುದ್ಧ ಇಂದು ಪ್ರತಿಭಟನೆಗೆ ಕರೆ ಕೊಟ್ಟ ಸಿಎಂ ಸಿದ್ದರಾಮಯ್ಯ



ಬಾಗಲಕೋಟೆ: ಕೇಂದ್ರ ಸರ್ಕಾರ ರಾಜ್ಯಕ್ಕೆ ಘೋಷಿಸಿರುವ ಬರಪರಿಹಾರ ರಾಜ್ಯ ಸರ್ಕಾರ ಸಲ್ಲಿಸಿದ ಮನವಿಯ ಕಾಲು ಭಾಗವೂ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಾಗಲಕೋಟೆಯಲ್ಲಿ ನಡೆದ ಕಾಂಗ್ರೆಸ್ ಸಮಾವೇಶದಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಛೀಮಾರಿ ಹಾಕಿದ ಮೇಲೆ ಈಗ ಕೇಂದ್ರ ಸರ್ಕಾರ 3,464 ಕೋಟಿ ರೂ. ಬರ ಪರಿಹಾರ ನೀಡುತ್ತಿದೆ. ಇದು ಬಹಳ ಕಡಿಮೆ ಪ್ರಮಾಣದ ಪರಿಹಾರ. ನಾವು ಕೇಳಿದ್ದು, 18,172 ಕೋಟಿ ರೂಪಾಯಿ. ಕೇಂದ್ರ ನೀಡುತ್ತಿರುವುದು ಕೇವಲ 3,464 ಕೋಟಿ ರೂ. ಇದು ರಾಜ್ಯ ಸರ್ಕಾರ ಸಲ್ಲಿಸಿದ ಮನವಿಯ ಕಾಲು ಭಾಗವೂ ಇಲ್ಲ. ಈ ಪರಿಹಾರ ರಾಜ್ಯಕ್ಕೆ ಸಾಲುವುದಿಲ್ಲ. ಹಾಗಾಗಿ ಬರ ಪರಿಹಾರ ಹೆಚ್ಚಿಸುವಂತೆ ನಾಳೆ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಇಂದು ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಕೇಂದ್ರದ ವಿರುದ್ಧ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಈ ಮೂಲಕ ರಾಜ್ಯಕ್ಕೆ ಕೇಂದ್ರ ಸರ್ಕಾರ ಮಾಡುತ್ತಿರುವ ಅನ್ಯಾಯದ ವಿರುದ್ಧ ನಮ್ಮ ಹೋರಾಟ ಮುಂದುವರೆಯಲಿದೆ ಎಂದು ಹೇಳಿದರು.



## ಗೋಕಾಕದಲ್ಲಿ ಸಚಿವ ಜಮ್ಮೀರ ಅಹ್ಮದ ರೋಷಾವೇಷ ಭಾಷಣಕ್ಕೆ ಗ್ಲಾಸ್ ಪೀಸ್ ಪೀಸ್

ಬೆಳಗಾವಿ: ಗೋಕಾಕ ಪಟ್ಟಣದ ಹಮ್ಮಿಕೊಂಡ ಮುಸ್ಲಿಂ ಸಮುದಾಯದ ಸಮಾವೇಶದಲ್ಲಿ ಕೈ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಪರ ಪ್ರಚಾರ ಮಾಡುವ ವೇಳೆ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ರೋಷಾವೇಷ ಭಾಷಣಕ್ಕೆ ಸ್ಟೇಜ್ ಡಯಾಸ್ ಗ್ಲಾಸ್ ಪೀಸ್..ಪೀಸ್ ಆದವು.

ಕರದಂಟು ನಾಡಿನಲ್ಲಿ ಮುಸ್ಲಿಂ ಸಮುದಾಯದ ಸಮಾವೇಶ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಗ ಮೃಣಾಲ್ ಹೆಬ್ಬಾಳಕರ ಪರ ಭಾಷಣ ಮಾಡುತ್ತಿದ್ದ ವೇಳೆ ಜಮೀರ್ ಅಹ್ಮದ್ ಖಾನ ಅವರು ಮಾತಿನ ಜೋಶ್ನಲ್ಲಿ ಸ್ಟೇಜ್ ಡಯಾಸ್ ಗೆ ಕೈಯಿಂದ ಗುದ್ದಿದ್ದ ಪರಿಣಾಮ ಗ್ಲಾಸ್ ಸ್ಥಳದಲ್ಲೇ ಪುಡಿಪುಡಿಯಾಗಿದೆ.

ಗಾಜು ಪುಡಿ ಪುಡಿಯಾದರೂ ಕೂಡ ಸಚಿವ ಜಮೀರ್ ತಮ್ಮ ಮಾತನ್ನು ನಿಲ್ಲಸಿದೇ ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿಕೊಡುವಲ್ಲಿ ಮುಸ್ಲಿಂ ಸಮುದಾಯದ ಕೊಡುಗೆ ಅಪಾರವಾಗಿದೆ. ಬಡ ಜನರ ಹಾಗೂ ರೈತರಿಗೆ ಕಾಂಗ್ರೆಸ್ ಪಕ್ಷ ಸಾಕಷ್ಟು ಯೋಜನೆಗಳನ್ನು ಜಾರಿ ಮಾಡಿದೆ. ಆದರೆ ಬಿಜೆಪಿ ಪಕ್ಷ ಜನರ ಬದುಕು ಬೀದಿಗೆ ತರುವಲ್ಲಿ ಪ್ರಮುಖ ಪಾತ್ರವಹಿಸಿದೆ ಎಂದು ಬಿಜೆಪಿ ವಿರುದ್ಧ ಹರಿಹಾಯ್ದು ಫುಲ್ ಜೋಶನಲ್ಲಿ ಭಾಷಣ ಮಾಡಿದ್ದಾರೆ.

ಗಾಜು ಪುಡಿ ಪುಡಿಯಾದರೂ ಕೂಡ ಸಚಿವ ಜಮೀರ್ ಅಹ್ಮದ್ ಅವರು ಈ ಕೈಗೆ ಏನು ಆಗಿಲ್ಲ.. ಈ ಕೈ ಸಾಧಾರಣ ಕೈಯಲ್ಲ... ಪಠಾಣ್ ನ ಕೈ... ಎಂದು ರೋಷಾವೇಷವಾಗಿ ಹೇಳಿದರು. ಸಚಿವ ಜಮೀರ್ ಅಹ್ಮದ್ ಜೋಶ ಭರಿತ ಮಾತಿಗೆ ಮತದಾರರಿಂದ ಶಿಳ್ಳೆ ಹಾಗೂ ಚಪ್ಪಾಳೆಗಳಿಂದ ಹುರುದುಂಬಿಸಿದರು.

# ಕಾಂಗ್ರೆಸ್‌ನಿಂದ ಸುಳ್ಳು ಪ್ರಣಾಳಿಕೆ: ರಾಹುಲ್, ಖರ್ಗೆ ವಿರುದ್ಧ ಜೆಡಿಎಸ್ ವರಿಷ್ಠ ಎಚ್‌ಡಿ ದೇವೇಗೌಡ ವಾಗ್ದಾಳಿ



ಹಾಸನ: ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರು ಸುಳ್ಳು ಪ್ರಣಾಳಿಕೆ ಬಿಡುಗಡೆ ಮಾಡುವ ಮೂಲಕ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಜೆಡಿಎಸ್ ವರಿಷ್ಠ ಎಚ್‌ಡಿ ದೇವೇಗೌಡ ಶುಕ್ರವಾರ ವಾಗ್ದಾಳಿ ನಡೆಸಿದರು.

ಇಂತಹ ಭರವಸೆಗಳನ್ನು ನೀಡಲು ರಾಹುಲ್ ಗಾಂಧಿ ಮತ್ತು ಖರ್ಗೆ ಪ್ರಧಾನಿಯೋ ಅಥವಾ ಸಿಎಂ ಆಗಿದ್ದಾರೆಯೇ?. 'ಅವರು ಕೇವಲ ಸಾಮಾನ್ಯ ಕಾಂಗ್ರೆಸ್ ಸದಸ್ಯರಷ್ಟೆ' ಎಂದು ಮತದಾನದ ನಂತರ ಸುದ್ದಿಗಾರರಿಗೆ ತಿಳಿಸಿದರು.

ಕಾಂಗ್ರೆಸ್‌ನ ಗ್ಯಾರಂಟಿ ಕಾರ್ಡ್ ಅನ್ನು 'ಸಾಮಾನ್ಯ ಕರಪತ್ರ' ಎಂದು ಕರೆದ ಅವರು, ಸೋಲಿನ ಭೀತಿಯಿಂದ ಕರಪತ್ರ ಹಂಚುವ ಮೂಲಕ ಬಡವರನ್ನು ಮೂರ್ಖರನ್ನಾಗಿಸಿರುವ ಕಾಂಗ್ರೆಸ್, ಕೇರಳ, ತೆಲಂಗಾಣ, ಆಂಧ್ರಪ್ರದೇಶ ಅಥವಾ ಯಾವುದೇ ರಾಜ್ಯದಲ್ಲಿ ಕರಪತ್ರವನ್ನು ಬಿಡುಗಡೆ ಮಾಡಿಲ್ಲ ಎಂದು ದೂರಿದರು.

ಕರಪತ್ರದಲ್ಲಿ ಮುಖ್ಯಮಂತ್ರಿ ಅಥವಾ ಅವರ ಉಪಮುಖ್ಯಮಂತ್ರಿಗಳ ಸಹಿ ಇರಬೇಕು. ವಿದ್ಯಾವಂತರು ಇಂತಹ ಪ್ರಣಾಳಿಕೆಯನ್ನು ನಂಬುವುದಿಲ್ಲ.

ಜೆಡಿಎಸ್‌ನ ಎಚ್‌ಡಿ ಕುಮಾರಸ್ವಾಮಿ ಮತ್ತು ಪ್ರಜ್ವಲ್ ರೇವಣ್ಣ ಅವರನ್ನು ಸೋಲಿಸುವ ಉದ್ದೇಶದಿಂದ ಕಾಂಗ್ರೆಸ್ ಕರಪತ್ರವನ್ನು ಹಂಚಿದೆ. ಜನರನ್ನು ದಾರಿತಪ್ಪಿಸುತ್ತಿರುವ ಬಗ್ಗೆ ಜೆಡಿಎಸ್ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡಿದೆ ಎಂದು ದೇವೇಗೌಡರು ತಿಳಿಸಿದರು.

ಕಲಬುರಗಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಸೋಲಿಸುವ ಬದಲು ಅವರ ಮೈಮೇಲೆ ಮಣ್ಣು ಮತ್ತು ಅಂತಿಮ ಸಂಸ್ಕಾರಕ್ಕೆ ಬಳಸುವ ಸಾಮಗ್ರಿಗಳನ್ನು ಹಾಕಬಹುದು ಎಂಬ ಮಲ್ಲಿಕಾರ್ಜುನ ಖರ್ಗೆ ಹೇಳಿಕೆಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಸಾರ್ವಜನಿಕ ಸಮಾರಂಭದಲ್ಲಿ ಇಂತಹ ಭಾವನಾತ್ಮಕ ಹೇಳಿಕೆಗಳನ್ನು ನೀಡುವ ಅಗತ್ಯವಿಲ್ಲ ಎಂದು ಹೇಳಿದರು.

## ಏ.29 ರಿಂದ ಮೇ.16 ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ–2 ; 12 ಪರೀಕ್ಷಾ ಕೇಂದ್ರಗಳು; 7039 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ: ಜಿಲ್ಲಾಧಿಕಾರಿ ದಿವ್ಯ ಪ್ರಭು



ಧಾರವಾಡ: ಕರ್ನಾಟಕ ಪರೀಕ್ಷಾ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ನಡೆಸಲಿರುವ 2024 ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ– 2 ಕ್ಕೆ ಧಾರವಾಡ ಜಿಲ್ಲೆಯಲ್ಲಿ 12 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, 7039 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಶಾಲಾ ಶಿಕ್ಷಣದ ಪದವಿ ಪೂರ್ವ ಇಲಾಖೆಯ ಉಪನಿರ್ದೇಶಕ ಸುರೇಶ ಕೆ.ಪಿ., ಅವರು ಪರೀಕ್ಷೆಯನ್ನು ಸುಗಮವಾಗಿ ಮತ್ತು ನಿಯಮಾನುಸಾರ ನಡೆಸಲು ಅಗತ್ಯ ಸಿದ್ದತೆ ಮಾಡಿದ್ದಾರೆ. ಪರೀಕ್ಷೆಗೆ ಅಗತ್ಯವಿರುವ ಸಿಬ್ಬಂದಿ ಮತ್ತು ವಾಹನಗಳನ್ನು ನೀಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಧಾರವಾಡ ನಗರದಲ್ಲಿ 4, ಹುಬ್ಬಳ್ಳಿ ನಗರದಲ್ಲಿ 5, ಅಣ್ಣಿಗೇರಿ, ಕುಂದಗೋಳ ಮತ್ತು ಕಲಘಟಗಿಯಲ್ಲಿ ತಲಾ ಒಂದು ಪರೀಕ್ಷಾ ಕೇಂದ್ರಗಳು ಸೇರಿ ಒಟ್ಟು 12 ಸ್ಥಳಗಳಲ್ಲಿ ಪರೀಕ್ಷಾ ಕೇಂದ್ರ ಸ್ಥಾಪಿಸಲಾಗಿದೆ. ಸ್ಥಾನಿಕ ಜಾಗೃತ ದಳಗಳನ್ನು ರಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಬಳಕೆಯನ್ನು ನಿಷೇಧಿಸಲಾಗಿದೆ ಮತ್ತು ಪ್ರತಿ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶ ವ್ಯಾಪ್ತಿಯಲ್ಲಿ ಜೆರಾಕ್ಸ್, ಕಂಪ್ಯೂಟರ್ ಅಂಗಡಿಗಳನ್ನು ಪರೀಕ್ಷಾ ಸಮಯದಲ್ಲಿ ಬಂದ್ ಮಾಡಲು ಆದೇಶಿಸಿ, ನಿಷೇಧಾಜ್ಞೆ ಜಾ–ರಿಗೊಳಿಸಿ, ಆದೇಶಿಸಲಾಗಿದೆ ಎಂದು ಜಿಲ್ಲಾದಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಿಟಗಿನಹಾಳ್ ಗ್ರಾಮದ ನರೇಗಾ ಕೂಲಿಕಾರರಿಗೆ ಸ್ವೀಪ್ ಜಾಗೃತಿ ಕಾರ್ಯಕ್ರಮ ಪ್ರಜಾಪ್ರಭುತ್ವ ಹಬ್ಬದಲ್ಲಿ ಎಲ್ಲರೂ ಪಾಲ್ಗೊಳ್ಳಿ: ಬಸವರಾಜ



ಬಳ್ಳಾರಿ: ಲೋಕಸಭಾ ಚುನಾವಣೆಯ ಪ್ರಜಾಪ್ರಭುತ್ವ ಹಬ್ಬದಲ್ಲಿ ಎಲ್ಲರೂ ಸಕ್ರಿಯವಾಗಿ ಪಾಲ್ಗೊಂಡು ತಪ್ಪದೇ ಮತದಾನ ಮಾಡಬೇಕು ಎಂದು ಹೆಚ್.ವೀರಾಪುರ ಗ್ರಾಪಂ ಕಾರ್ಯದರ್ಶಿ ಬಸವರಾಜ ಅವರು ಹೇಳಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ನಿಮಿತ್ತ ಶನಿವಾರ ಮತದಾನ ಕು–ರಿತು ಮತದಾರರಲ್ಲಿ ಜಾಗೃತಿ ಮೂಡಿಸಲು ಕುರುಗೋಡು ತಾಲ್ಲೂಕಿನ ಹೆಚ್.ವೀರಾಪುರ ಗ್ರಾಪಂ ನ ಚಿಟಗಿನಹಾಳ್ ಗ್ರಾಮದಲ್ಲಿ ನರೇಗಾ ಕಾಮಗಾರಿ ಸ್ಥಳದಲ್ಲಿ ಸ್ವೀಪ್ ಜಾಗೃತಿ ಹಾಗೂ ವಲಸೆ ಯಾಕ್ರಿ ನಿಮ್ಮೂರಲ್ಲೆ ಉದ್ಯೋಗ ಖಾತ್ರಿ ಅಭಿಯಾನದಲ್ಲಿ ಅವರು ಮಾತನಾಡಿದರು.

ಮೇ 7 ರಂದು ಜರುಗುವ ಚುನಾವಣೆಯಲ್ಲಿ ತಪ್ಪದೇ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸುವುದರ ಮೂಲಕ ಸುಭದ್ರ ದೇಶವನ್ನಾಗಿ ನಿರ್ಮಿಸೋಣ.

ಮತದಾನ ದಿನದಂದು ನಾವು ಸಮಯ ವ್ಯರ್ಥ ಮಾಡದೆ ಚುನಾವಣೆ ಆಯೋಗ ನಿಗದಿಪಡಿಸಿದ ದಾಖಲೆಗಳನ್ನು ತೆಗೆದುಕೊಂಡು ಹೋಗಿ ಮತ ಚಲಾಯಿಸಬೇಕು.

ಗ್ರಾಮದಲ್ಲಿ ಅತಿಹೆಚ್ಚು ಮತದಾನವಾಗುವಂತೆ ನರೇಗಾ ಕೂಲಿಕಾರರು ಕೈಜೋಡಿಸಬೇಕು ಎಂದರು.

ವಲಸೆ ಯಾಕ್ರಿ ನಿಮ್ಮೂರಲ್ಲೆ ಉದ್ಯೋಗ ಖಾತ್ರಿ ಅಭಿಯಾನ ಆರಂಭವಾಗಿದ್ದು, ನರೇಗಾ ಕೆಲಸಕ್ಕೆ ಕಲ್ಲೂರ ಗ್ರಾಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬರಬೇಕು.

ವೈಯಕ್ತಿಕ ಕಾಮಗಾರಿಗಳನ್ನು ಮಾಡಿಕೊಳ್ಳುವ ಮೂಲಕ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಈ ವೇಳೆ ಐಇಸಿ ಸಂಂ–ಯೋಜಕ ಚಂದ್ರಶೇಖರ್, ಬಿಎಫ್ಟಿ ಮಾರೇಶ್, ಗ್ರಾಮ ಕಾಯಕಮಿತ್ರರಾದ ಅಮೃತ ಸೇ–ರಿದಂತೆ ಗ್ರಾಪಂ ಸಿಬ್ಬಂದಿ ಕೂಲಿಕಾರರು ಹಾಜರಿದ್ದರು.

## ಅಗತ್ಯ ಸೇವೆಗಳ ಗೈರು ಹಾಜರಿ ಮತದಾರರ ಮತದಾನಕ್ಕಾಗಿ "ಅಂಚೆ ಮತದಾನ ಕೇಂದ್ರ" ಸೌಲಭ್ಯ



ಬಳ್ಳಾರಿ: 09–ಬಳ್ಳಾರಿ (ಪ.ಪಂ) ಲೋಕಸಭೆ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ, ಅಗತ್ಯ ಸೇವೆಗಳ ವರ್ಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಅಂಚೆ ಮತ ಪತ್ರಗಳನ್ವಯ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಅಂಚೆ ಮತ ಪತ್ರಗಳ ಮೂಲಕ ಮತ ಚಲಾಯಿಸಲು ಮೇ 01 ರಿಂದ 03 ರ ವರೆಗೆ ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ನಗರದ ರೈಲ್ವೇ ನಿಲ್ದಾಣದ ಎದುರುಗಡೆಯ ಜಿಲ್ಲಾಧಿಕಾರಿಗಳ ಕಚೇರಿಯ ಗಾಂಧಿಭವನದಲ್ಲಿ "ಅಂಚೆ ಮತದಾನ ಕೇಂದ್ರ"ವನ್ನು ತೆರೆಯಲಾಗಿದ್ದು, ಅಗತ್ಯ ಸೇವೆಗಳ ವರ್ಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ಮತ ಚಲಾಯಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಮುಂಬೈ–ಪುಣೆ ಹೆದ್ದಾರಿಯಲ್ಲಿ ಹೊತ್ತಿ ಉರಿದ ಐಷಾರಾಮಿ ಬಸ್

ಮುಂಬೈ : ಮುಂಬೈ–ಪುಣೆ ಎಕ್ಸ್‌ಪ್ರೆಸ್‌ವೇಯಲ್ಲಿ ಶನಿವಾರ ಬೆಳಿಗ್ಗೆ ಖಾಸಗಿ ಐಷಾರಾಮಿ ಬಸ್ನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಅದರಲ್ಲಿದ್ದ 36 ಪ್ರಯಾಣಿಕರು ಅದೃಷ್ಟವಶಾತ್ ಪಾರಾಗಿದ್ದಾರೆ.

ಬಸ್ ಮುಂಬೈನಿಂದ ಪುಣೆಗೆ ತೆರಳುತ್ತಿದ್ದಾಗ ಮಾವಲ್ ತಾಲ್ಲೂಕಿನ ಅಢೆ ಗ್ರಾಮದ ಬಳಿ ಬೆಳಿಗ್ಗೆ 7: 30 ರ ಸುಮಾರಿಗೆ ಈ ಘಟನೆ ನಡೆದಿದೆ. ಬಸ್ಸಿನ ಟೈರ್ ಸ್ಫೋಟಗೊಂಡ ನಂತರ ಬೆಂಕಿ ಕಾಣಿಸಿಕೊಂಡಿದೆ ಎಂದು ವರದಿಯಾಗಿದೆ. ಬಸ್ ಚಾಲಕನ ತ್ವರಿತ ಚಿಂತನೆಯು ಎಲ್ಲಾ ಪ್ರಯಾಣಿಕರನ್ನು ತ್ವರಿತವಾಗಿ ಸ್ಥಳಾಂತರಿಸಲು ಅನುವು ಮಾಡಿಕೊಟ್ಟಿತು, ಸಂಭಾವ್ಯ ಅನಾಹುತವನ್ನು ತಪ್ಪಿಸಿತು.

ಭಾರತೀಯ ರಿಸರ್ವ್ ಬೆಟಾಲಿಯನ್ (ಐಆರ್‌ಬಿ) ಗಸ್ತು ತಂಡ, ದೇವದೂತ್ ವ್ಯವಸ್ಥೆ, ಡೆಲ್ಟಾ ಫೋರ್ಸ್ ಮತ್ತು ವಡ್ಗಾಂವ್ ಮಾವಲ್ ಸಂಚಾರ ಪೊಲೀಸರ ಸಂಘಟಿತ ಪ್ರಯತ್ನಗಳಿಗೆ ಬೆಂಕಿಯನ್ನು ನಂದಿಸಲಾಗಿದೆ. ಸಂಚಾರವನ್ನು ತಾತ್ಕಾಲಿಕವಾಗಿ ನಿಲ್ಲಿಸಲಾಯಿತು ಆದರೆ ನಂತರ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದ ನಂತರ ಪುನರಾರಂಭಿಸಲಾಯಿತು.

## ಬಿಜೆಪಿ ಅಭ್ಯರ್ಥಿ ಡಾ.ಕೆ.ಸುಧಾಕರ್ ವಿರುದ್ಧ ಎಫ್ ಐ ಆರ್ ದಾಖಲು



ಚಿಕ್ಕಬಳ್ಳಾಪುರ: ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಕೆ. ಸುಧಾಕರ್ ವಿರುದ್ಧ ಎಫ್ ಐ ಆರ್ ದಾಖಲಾಗಿದೆ. ಎಸ್. ಎಸ್. ಟಿ ಅಧಿಕಾರಿಗಳು ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಡಾ.ಕೆ.ಸುಧಾಕರ್ ಆಪ್ತ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಮಾದಾವರ ಗೋವಿಂದಪ್ಪ ನಿವಾಸದ ಮೇಲೆ ಐಟಿ ದಾಳಿ ನಡೆಸಿದ್ದ ವೇಳೆ 4.82 ಕೋಟಿ ಹಣ ಜಪ್ತಿ ಮಾಡಿದ್ದರು. ಬೆಂಗಳೂರು ಉತ್ತರ ತಾಲೂಕಿನ ನೋಡಲ್ ಅಧಿಕಾರಿ ಮುನೀಶ್ ಮೌದ್ಗಿಲ್ ಅವರಿಗೆ ಕರೆ ಮಾಡಿದ್ದ ಸುಧಾಕರ್ ಗೋವಿಂದಪ್ಪ ಅವರಿಗೆ ಸಹಾಯ ಮಾಡಿ, ಹಣ ವಾಪಾಸ್ ಕೊಡುವಂತೆ ಸೂಚಿಸಿದ್ದರು.

ಅಲ್ಲದೇ ಗೋವಿಂದಪ್ಪ ಅವರು ಕೂಡ ಮುನೀಶ್ ಮೌದ್ಗಿಲ್ ಗೆ ವಾಟ್ಸಾಪ್ ಸಂದೇಶ ರವಾನಿಸಿ ತಮಗೆ ಸಹಾಯ ಮಾಡುವಂತೆ ಮನವಿ ಮಾಡಿದ್ದರು. ಈ ವಿಚಾರವನ್ನು ಸಾಕ್ಷಿ ಸಮೇತ ಮುನೀಶ್ ಮೌದ್ಗಿಲ್ ಆದಾಯ ತೆರಿಗೆ ಇಲಾಖೆ ನೀಡಿದ್ದರು.

ಈ ಹಿನ್ನೆಲೆಯಲ್ಲಿ ಎಸ್.ಎಸ್ ಟಿ ತಂಡದ ಮುಖ್ಯಸ್ಥ ದಶರಥ ಕಂಬಾರ್ ಮಾದನಾಯಕನಹಳ್ಳಿ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಸುಧಾಕರ್ ವಿರುದ್ಧ ಅನುಚಿತ ಪ್ರಭಾವ, ಲಂಚಮ್ ಭ್ರಷ್ಟಾಚಾರ ಪ್ರಯತ್ನ, ಕರ್ತವ್ಯಕ್ಕೆ ಅಡ್ಡಿ ಹಾಗೂ ಹಸ್ತಕ್ಷೇಪ ಮಾಡಿದ್ದಾಗಿ ಆರ್ ಪಿ ಕಾಯ್ದೆಯಡಿ ಸೆಕ್ಷನ್ 171 ಇ, 171 ಎಫ್, 171ಬಿ, 171 ಸಿ ಆರೋಪದಲ್ಲಿ ಎಫ್ ಐ ಆರ್ ದಾಖಲಾಗಿದೆ.



## ಕಂಪ್ಲಿ: ಮತದಾರರ ಮಾರ್ಗದರ್ಶನ ಕೈಪಿಡಿ ವಿತರಿಸಿ ತಪ್ಪದೇ ಮತದಾನ ಮಾಡುವಂತೆ ಜಾಗೃತಿ

ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮತದಾನ ಪ್ರಮಾಣ ಹೆಚ್ಚಿಸಲು ಕಂಪ್ಲಿ ಪಟ್ಟಣದಲ್ಲಿ ಹಲವಾರು ಸ್ವೀಪ್ ಕಾರ್ಯಕ್ರಮಗಳನ್ನು ಆಯೋಜಿಲಾಗುತ್ತಿದ್ದು, ಶುಕ್ರವಾರದಂದು ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಮತ್ತು ಕಂಪ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಹಾಗೂ ಪುರಸಭೆ ವತಿಯಿಂದ ಕಂಪ್ಲಿ ಪಟ್ಟಣದ 4ನೇ ವಾರ್ಡ್ ಚಪ್ಪದರಹಳ್ಳಿಯಲ್ಲಿ ಮತದಾರರ ಮಾರ್ಗದರ್ಶನ ಕೈಪಿಡಿ ವಿತರಿಸಿ ಮತದಾನ ಜಾಗೃತಿ ಮೂಡಿಸಲಾಯಿತು.

ಕಂಪ್ಲಿ ಪುರಸಭೆ ಸಮುದಾಯ ಸಂಘಟನಾಧಿಕಾರಿ ವಸಂತಮ್ಮ ಅವರು ಮಾತನಾಡಿ, ಮೇ 07 ರಂದು ಎಲ್ಲರೂ ತಪ್ಪದೇ ಮತದಾನ ಮಾಡಬೇಕು. ನಿಮ್ಮ ಅಕ್ಕ–ಪಕ್ಕದವರಿಗೂ ಮತದಾನ ಮಾಡುವಂತೆ ತಿಳಿಸಬೇಕು ಎಂದರು.

ಮತದಾನ ದಿನದಂದು ಯಾವುದೇ ಕೆಲಸವಿಲ್ಲವೆಂದು ಯಾರೂ ಮತದಾನ ಪ್ರಕ್ರಿಯೆಯಿಂದ ತಪ್ಪಿಸಿಕೊಳ್ಳುವಂತಿಲ್ಲ. ಪ್ರತಿಯೊಬ್ಬರೂ ಮತದಾನ ಮಾಡುವ ಮೂಲಕ ಸಮರ್ಥರನ್ನು ಆಯ್ಕೆ ಮಾಡಬೇಕು. ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಮನವರಿಕೆ ಮಾಡಿದರು.

ಇದೇ ಸಂದರ್ಭದಲ್ಲಿ ಮತದಾರರ ಪ್ರತಿಜ್ಞೆಯನ್ನು ಬೋಧಿಸಲಾಯಿತು.

# ಬಿಜೆಪಿಗೆ ಅದಾನಿ, ಅಂಬಾನಿಯ ಚಿಂತೆ; ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಿಡಿ




ಬೆಳಗಾವಿ: "ಕಾಂಗ್ರೆಸ್ ಪಕ್ಷ ಜನಪರವಾದ ಯೋಜನೆಗಳನ್ನ ಕೊಡುತ್ತೆ; ಆದರೆ, ಬಿಜೆಪಿ ಬರೀ ಅದಾನಿ, ಅಂಬಾನಿಯವರ ಬಗ್ಗೆ ವಿಚಾರ ಮಾಡುತ್ತೆ " ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಆರ್. ಹೆಬ್ಬಾಳ್ಕರ್ ಕಿಡಿಕಾರಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳ್ಕರ್ ಪರ ಬೆಳಗಾವಿ ನಗರದ ವಿವಿಧೆಡೆ ಶುಕ್ರವಾರ ಸಂಜೆ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಸಚಿವರು, "ಕಾಂಗ್ರೆಸ್ಸಿನವರು ಹೃದಯದಿಂದ ಜನರ ಕೆಲಸ ಮಾಡುತ್ತೆ; ಆದರೆ, ಬಿಜೆಪಿಯವರು ಬರೀ ತಲೆಯಿಂದ ಕೆಲಸ ಮಾಡುತ್ತಾರೆ. ಅವರು ಬರೀ ಎಮೋಷನಲ್ ವಿಚಾರ ಮಾತನಾಡುತ್ತಾರೆ; ಕಾಂಗ್ರೆಸ್ ಪಕ್ಷ ಜನರ ಜೀವನ ಕಟ್ಟುವ ವಿಚಾರವಾಗಿ ಮಾತನಾಡುತ್ತೆ " ಎಂದರು.

ನೆಹರು ನಗರದಲ್ಲಿ ಹಮ್ಮಿಕೊಂಡಿದ್ದ ಪೌರ ಕಾರ್ಮಿಕರ ಸಂಘದ ಸಭೆ, ಸದಾಶಿವ ನಗರ, ಅಂಬೇಡ್ಕರ್ ನಗರ, ಶಿವಬಸವ ನಗರ, ರಾಮತೀರ್ಥ ನಗರ, ಕಣಬರ್ಗಿ ಮೊದಲಾದ ಪ್ರದೇಶದಲ್ಲಿ ಪ್ರಚಾರ ನಡೆಯಿತು.

ರಾಜ್ಯದಲ್ಲಿ ನಮ್ಮ ಜನಪರವಾದ ಕಾಂಗ್ರೆಸ್ ಸರ್ಕಾರ ಗೃಹಲಕ್ಷ್ಮೀಯಂತಹ ಜನೋಪಯೋಗಿ ಯೋಜನೆಯನ್ನು ಜಾರಿಗೆ ತಂದಿದೆ. ಇಡೀ ದೇಶದಲ್ಲಿ ಯಾವುದಾದರೂ ರಾಜ್ಯದಲ್ಲಿ ಇಂತಹ ಜನಪರವಾದ ಯೋಜನೆಯನ್ನು ಜನ–ರಿಗೆ ಕೊಟ್ಟಿದ್ದಾರಾ..? ಎಂದ ಸಚಿವರು, ಗೃಹಲಕ್ಷ್ಮೀ ಯೋಜನೆಗೆಂದು ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ಹನ್ನೆರೆಡು ನೂರು ಕೋಟಿ ರೂಪಾಯಿ ತಿಂಗಳಿಗೆ ಕೊಡುತ್ತಿದ್ದೇವೆ; ಬೇರೆ ಯಾರು ಕೊಡುತ್ತಿದ್ದಾರೆ..? ಯಾವ ಸರ್ಕಾರ ಕೊಟ್ಟಿದೆ ಎಂದು ಪ್ರಶ್ನಿಸಿದರು.

ರಸ್ತೆ ಮಾಡಬಹುದು; ಗಟಾರ ಮಾಡಬಹುದು; ಆದರೆ, ಗೃಹಲಕ್ಷ್ಮೀಯಂತಹ ಜನೋಪಯೋಗಿ ಆಗುವಂತಹ ಯೋಜನೆಗಳನ್ನ ಏಕೆ ಕೊಡಬೇಕು..? ಜನರೇನು ಈ ಯೋಜನೆಗಳನ್ನ ಕೇಳಿದ್ರಾ..? ಕೊರೊನಾ ನಂತರ ಜನರ ಜೀವನ ಬಹಳ ಕಷ್ಟಕ್ಕೆ ಸಿಲುಕಿತ್ತು. ಹಾಗಾಗಿ ಸ್ವಲ್ಪವಾದರೂ ನೆಮ್ಮದಿ ಸಿಗಲಿ ಎಂದು ಇಂತಹ ಯೋಜನೆ ತಂದೆವು. ಮೋದಿ ಸರ್ಕಾರ ಕಳೆದ 10 ವರ್ಷಗಳಲ್ಲಿ ಇಂತಹ ಜನಪರ ಯೋಜನೆಯನ್ನ ಜಾರಿಗೆ ತರಲೇ ಇಲ್ಲ ಎಂದು ಕಿಡಿಕಾ–ರಿದರು.

ದೇಶದಲ್ಲಿ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ; ಗ್ಯಾಸ್, ಪೆಟ್ರೋಲ್ ಬೆಲೆ ಮೂರುಪಟ್ಟು ಹೆಚ್ಚಾಗಿದೆ. ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ ಪೆಟ್ರೋಲ್, ಗ್ಯಾಸ್ ಬೆಲೆ ಬಹಳ ಜಾಸ್ತಿ ಮಾಡಿದ್ದಾರೆಂದು ಬಿಜೆಪಿಯವರು ಹೇಳುತ್ತಿದ್ದರು; ಆದರೆ, ಅವ–ರೀಗ ಮಾಡಿರುವುದೇನು..? ಎಂದು ಪ್ರಶ್ನಿಸಿದ ಸಚಿವರು, ವರ್ಷಕ್ಕೆ ಎರಡು ಕೋಟಿ ಜಾಬ್ ಕೊಡುತ್ತೇವೆಂದು ಮೋದಿಯವರು ಹೇಳಿದ್ದರು. ಆದ–'ರೆ ಈಗ ಎಷ್ಟು ಜಾಬ್ ಕೊಟ್ಟಿದ್ದಾರೆ; ಬಿಜೆಪಿಯವರು ಹೇಳುವುದೆಲ್ಲ ಬರೀ ಸುಳ್ಳು ಎಂದು ಲೇವಡಿ ಮಾಡಿದರು.

ಈ ಬಾರಿ ಮೃಣಾಲ ಹೆಬ್ಬಾಳಕರ್ ಅವರಿಗೆ ಮತ ನೀಡಿ ಆರಿಸಿ ತರಬೇಕು ಎಂದು ಸಚಿವರು ವಿನಂತಿಸಿದರು.

ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್, ಶಾಸಕ ರಾಜು ಸೇಠ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಮಾಜಿ ಶಾಸಕರಾದ ಎಸ್.ಸಿ.ಮಾಳಗಿ, ಮಾಜಿ ಸಚಿವರಾದ ಶಶಿಕಾಂತ್ ನಾಯಕ್, ಆರ್ವಿ.ಪಾಟೀಲ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ವಿನಯ ನಾವಲಗಟ್ಟಿ, ರೋಹಿಣಿ ಪಾಟೀಲ, ಎಸ್.ಎಸ್. ಕಿವಡಸಣ್ಣವರ್, ಆಸೀಫ್ ಮುಲ್ಲಾ, ಬೈರೆಗೌಡ, ಅಜಿತ್ ಚೌಹಾನ್, ಸತೀಶ್ ಜಾಧವ್, ಶಿವಾಜಿ ಜಾಧವ್, ಸಂಭಾಜೀ ಜಾಧವ್, ಅಕ್ಷಯ ಚೌಹಾನ್, ಸರಳಾ ಹೆರೆಕಾರ್, ಯಲ್ಲಪ್ಪ ನಾಯಿಕ್, ರಾಕೇಶ್ ಗುನ್ನವಗೋಳ, ಗಣೇಶ್ ರನ್ನದ್, ಅಜಯ ಬಿರಂಜೆ, ಸಂಜಯ ಸಸಾನೇ, ಮೋಹನ್ ಸಸಾನೇ, ರವಿ ದೇಮಟ್ಟಿ, ಮಹೇಂದ್ರ ಕವಳಗಿ, ಜಾನ್ ಲೊಂಡೆ, ವಿಜಯ್ ಲೊಂಡೆ, ರಮನ್ ಚೌಗುಲೆ, ನೇಸರ್ ಲೊಂಡೆ, ವಿಜಯೇಂದ್ರ ಲೊಂಡೆ, ಸ್ವಯಂ ಲೊಂಡೆ, ಓಂಕಾರ್ ಲೊಂಡೆ, ಮುಗಟಸಾಬ್ ಹೊಂಗಲ, ತಾಹಿರ್ ಸೈಯದ್, ಎಂ.ಬಿ.ನಿರ್ವಾಣಿ, ಎಂ.ಎಂ.ಕಿತ್ತೂರ್, ಸಿ.ಬಿ.ಪಾಟೀಲ, ವಕೀಲರಾದ ಯರಗಣವಿ, ಲತಾ ಮಾನೆ, ಪುಷ್ಪ ಪರ್ವತರಾವ್, ರಾಜಾ ಸಲೀಂ, ದಿನೇಶ್ ನಾಶಿಪುಡಿ, ಜ್ಯೋತಿ ಬಾವಿಕಟ್ಟಿ, ಅನುಶ್ರೀ ದೇಶಪಾಂಡೆ, ಸರಳಾ ಹೆರೆಕರ್, ಜಯಶ್ರೀ ಮಾಳಗಿ, ಶಿವಾನಂದ ತಂಬಾಕೆ, ಸಂತೋಷ ಪರ್ವತರಾವ್ ಮೊದಲಾದವರು ಉಪಸ್ಥಿತರಿದ್ದರು.

## ದೊಡ್ಡಬಳ್ಳಾಪುರ: ಹಾವು ಕಡಿದು ಮಗು ಸಾವು



ದೊಡ್ಡಬಳ್ಳಾಪುರ: ತಾಲ್ಲೂಕಿ ನ ಕೋಳೂರು ಗ್ರಾಮದ ತೋಟ ವೊಂದರಲ್ಲಿ ಶುಕ್ರವಾರ ಸಂಜೆ ಹಾವು ಕಡಿದು ಏಳು ವರ್ಷದ ಮಗು ಮೃತಪಟ್ಟಿದೆ.

ತಾಲ್ಲೂಕಿನ ತೂಬಗೆರೆ ಹೋಬಳಿ ಟಿ. ಹೊಸಹಳ್ಳಿ ಗ್ರಾಮದ ನಿವಾಸಿಗಳಾದ ರಾಮಾಂಜಿ ದಂಪತಿಗಳು ಕೋಳೂರು ಗ್ರಾಮದಲ್ಲಿನ ತೋಟವೊಂದರಲ್ಲಿ ಕೆಲಸ ಮಾಡಿಕೊಂಡು ಅಲ್ಲೇ ವಾಸವಾಗಿದ್ದರು.

ಶುಕ್ರವಾರ ಸಂಜೆ ಸುಮಾರು 6 ಗಂಟೆ ಸಮಯದಲ್ಲಿ ಮಗುವಿಗೆ ಹಾವು ಕಚ್ಚಿತ್ತು.

ಅಸ್ವಸ್ಥಗೊಂಡಿರುವ ಮಗುವನ್ನು ಗಮನಿಸಿದ ಪೋಷಕರು, ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ಚಿಕಿತ್ಸೆಗೆ ಸ್ಪಂದಿಸದೆ ಮಗು ಮೃತಪಟ್ಟಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

## ಚಿಕ್ಕೋಡಿ: ಅಣ್ಣಾಸಾಹೇಬ ಜೊಲ್ಲೆ ಅವರಿಂದ ಮಾತ್ರ ಅಭಿವೃದ್ಧಿ ಸಾಧ್ಯ: ಮಹಾಂತೇಶ



ಚಿಕ್ಕೋಡಿ: 'ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಅಭಿವೃದ್ಧಿಗೆ ಮತ್ತೊಮ್ಮೆ ಸಂಸದ ಅಣ್ಣಾಸಾಹೇಬ ಜೊಲ್ಲೆ ಅವರನ್ನು ಗೆಲ್ಲಿಸಿ. ಕ್ಷೇತ್ರದಲ್ಲಿ ಮತ್ತಷ್ಟು ಅಭಿವೃದ್ಧಿ ನಿರೀಕ್ಷಿಸಿ' ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಮಹಾಂತೇಶ ಕವಟಗಿಮಠ ಹೇಳಿದರು.

ತಾಲ್ಲೂಕಿನ ಖಡಕಲಾಟ ಗ್ರಾಮದಲ್ಲಿ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಪರವಾಗಿ ಹಮ್ಮಿಕೊಂಡ ಪ್ರಚಾರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, 'ಜಾಗತಿ–ಕ ಮಟ್ಟದಲ್ಲಿ ಭಾರತವನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಬೇಕಾದರೆ ಮತ್ತೊಮ್ಮೆ ನರೇಂದ್ರ ಮೋದಿ ಅವರ ಕೈ ಬಲಪಡಿಸಬೇಕು. ಕಳೆದ 10 ವರ್ಷಗಳಲ್ಲಿ ಮೋದಿ ಅವರು ಹಲವಾರು ಯೋಜನೆಗಳು ಜಾರಿಗೆ ತಂದಿದ್ದು, ಅವುಗಳನ್ನು ಮನೆ ಮನೆಗೆ ಮುಟ್ಟಿಸುವ ಕಾರ್ಯ ಕಾರ್ಯಕರ್ತರಿಂದ ಆಗಬೇಕು' ಎಂದರು.

ಅಣ್ಣಾಸಾಹೇಬ ಜೊಲ್ಲೆ ಮಾತನಾಡಿ, 'ನರೇಂದ್ರ ಮೋದಿ ಅವರು ಅತ್ಯಂತ ಜನಪ್ರಿಯ ನಾಯಕರಾಗಿ ಹೊರಹೊಮ್ಮಿದ್ದಾರೆ. ಭಾರತದ ಅಭ್ಯುದಯಕ್ಕೆ ಅಪಾರ ಕೊಡುಗೆ ನೀಡುತ್ತಿದ್ದಾರೆ. ಅವರನ್ನು 3ನೇ ಅವಧಿಗೆ ಪ್ರಧಾನಿ ಆಗಿಸಲು ಹಾಗೂ ಚಿಕ್ಕೋಡಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ನನ್ನನ್ನು ಬೆಂಬಲಿಸಿ, ಪ್ರಚಂಡ ಬಹುಮತಗಳಿಂದ ಗೆಲ್ಲಿಸಿ' ಎಂದು ಮನವಿ ಮಾಡಿದರು.

ಬಿಜೆಪಿ ಚಿಕ್ಕೋಡಿ ಜಿಲ್ಲಾ ಘಟಕದ ಅಧ್ಯಕ್ಷ ಸತೀಶ ಅಪ್ಪಾಜಿಗೊಳ, ವಿಶ್ವನಾಥ ಕಮತೆ, ಎನ್.ಜಿ. ಪಾಟೀಲ, ಪ್ರಲ್ಹಾದ್ ಪಾಟೀಲ, ಕಾಶಿನಾಥ ಕಮತೆ, ರಾವಸಾಬ ಝಿಪರೆ, ವಿನಾಯಕ ಪಾಟೀಲ, ಪವನ ಮಹಾಜನ, ಉಮೇಶ ಘಾಟಗೆ ಸೇರಿದಂತೆ ಸ್ಥಳೀಯ ಮುಖಂಡರು, ಕಾರ್ಯಕರ್ತರು ಇದ್ದರು.

# ಬಿಜೆಪಿ ಟೀಕಿಸಲು ಕಾಂಗ್ರೆಸ್ ಬಳಿ ವಿಷಯವಿಲ್ಲ: ಜಗದೀಶ ಶೆಟ್ಟರ್



ಬೆಳಗಾವಿ: 'ಪ್ರಧಾನಿ ನರೇಂದ್ರ ಮೋದಿ ಮತ್ತು ಬಿಜೆಪಿ ಟೀಕಿಸಲು ಕಾಂಗ್ರೆಸ್‌ನವರ ಬಳಿ ಅಸ್ತ್ರವಿಲ್ಲ. ಹಾಗಾಗಿ ನನ್ನನ್ನೇ ಗುರಿಯಾಗಿಸಿಕೊಂಡು ಟೀಕಿಸುತ್ತಿದ್ದಾರೆ. ಆದರೆ, ಬೆಳಗಾವಿ ಕ್ಷೇತ್ರದಲ್ಲಿನ ವಿವಿಧ ಭಾಷಿಕರು ಬಿಜೆಪಿ ಬೆಂಬಲಿಸುತ್ತಿದ್ದಾರೆ' ಎಂದು ಬೆಳಗಾವಿ ಲೋಕಸಭೆ ಕ್ಷೇತ್ರದ ಅಭ್ಯರ್ಥಿ ಜಗದೀಶ ಶೆಟ್ಟರ್ ಹೇಳಿದರು.

ಇಲ್ಲಿನ ಬಿ.ಎಸ್.ಯಡಿಯೂರಪ್ಪ ಮಾರ್ಗದ ಮಾಲಿನಿ ಸಿಟಿ ಮೈದಾನದಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲಿರುವ ಸ್ಥಳವನ್ನು ಶುಕ್ರವಾರ ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

'ಇದು ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಅಥವಾ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲ. ಆ ಚುನಾವಣೆಯಲ್ಲಿ ಸ್ಥಳೀಯ ಸಮಸ್ಯೆ ಆಟವಾಡುತ್ತವೆ. ಆದರೆ, ಲೋಕಸಭೆ ಚುನಾವಣೆ ರಾಷ್ಟ್ರೀಯ ವಿಷಯಗಳ ಆಧಾರದಲ್ಲೇ ನಡೆಯುತ್ತದೆ. ಸುರಕ್ಷಿತ ಮತ್ತು ಸದೃಢ ರಾಷ್ಟ್ರಕ್ಕಾಗಿ ಮೋದಿ ಮೂರನೇ ಬಾರಿ ಪ್ರಧಾನಿಯಾಗಲೆಂದು ಜನ ಬಯಸುತ್ತಿದ್ದಾರೆ. ಬೆಳಗಾವಿ ಕ್ಷೇತ್ರದಲ್ಲಿನ ವಿವಿಧ ಭಾಷಿಕ ಮತ್ತು ಸಮುದಾಯಗಳ ಮತದಾರರು ಹಿಂದಿನ ಚುನಾವಣೆಯಲ್ಲಿ ಬಿಜೆಪಿ ಪರ ನಿಂತಿ–ದ್ದರು. ಈ ಸಲವೂ ನಿಲ್ಲುತ್ತಾರೆ' ಎಂದರು.

'ಎನ್‌ಡಿಎ ಮೈತ್ರಿಕೂಟವು ಮೋದಿ ಅವರನ್ನು ಪ್ರಧಾನಿ ಅಭ್ಯರ್ಥಿ ಎಂದು ಘೋಷಿಸಿದೆ. ಆದರೆ, 'ಇಂಡಿ' ಮೈತ್ರಿ ಕೂಟದವರಿಗೆ ಪ್ರಧಾನಿ ಅಭ್ಯರ್ಥಿ ಯಾರು ಎಂದೇ ಗೊತ್ತಿಲ್ಲ. ಈ ಚುನಾವಣೆಯಲ್ಲಿ ಬಹುಮತ ಗಳಿಸಲು ಯಾವುದೇ ಪಕ್ಷಕ್ಕೆ 270 ಸಂಸದರ ಅಗತ್ಯವಿದೆ. ಆದರೆ, 230 ಸ್ಥಾನಗಳಲ್ಲಿ ಮಾತ್ರ ಸ್ಪರ್ಧಿಸಿರುವ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ' ಎಂದರು.

'ಏಪ್ರಿಲ್ 27ರಂದು ರಾತ್ರಿ ಬೆಳಗಾವಿಗೆ ಆಗಮಿಸಿ ವಾಸ್ತವ್ಯ ಹೂಡಲಿರುವ ಪ್ರಧಾನಿ, 28ರಂದು ಬೆಳಿಗ್ಗೆ 10ಕ್ಕೆ ಇಲ್ಲಿನ ಬಿ.ಎಸ್.ಯಡಿಯೂರಪ್ಪ ಮಾರ್ಗದ ಮಾಲಿನಿ ಸಿಟಿ ಮೈದಾನದಲ್ಲಿ ನಡೆಯುವ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳುವರು. ಇದರಲ್ಲಿ ಬೆಳಗಾವಿ ಲೋಕಸಭೆ ಕ್ಷೇತ್ರ ವ್ಯಾಪ್ತಿಯ ಎಲ್ಲ ವಿಧಾನಸಭೆ ಕ್ಷೇತ್ರಗಳ ಸಹಸ್ರಾರು ಮಂದಿ ಸೇರಲಿದ್ದಾರೆ. ಪ್ರಧಾನಿ ಅವರು ಇಲ್ಲಿನ ನಾಯಕರ ಜತೆ ಮೋದಿ ಸಭೆ ನಡೆಸುತ್ತಾರೆ ಎಂಬ ಬಗ್ಗೆ ನಮಗೆ ಮಾಹಿತಿ ಇಲ್ಲ' ಎಂದರು.

'ಮುಸ್ಲಿಂ ತುಷ್ಟೀಕರಣ ನೀತಿಯಿಂದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು, ವೈಯಕ್ತಿಕ ಕಾರಣಕ್ಕೆ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ನಡೆದಿದೆ ಎನ್ನುತ್ತಿದ್ದಾರೆ. ಮುಸ್ಲಿಂ ಸಮುದಾಯಕ್ಕೆ ಸಂತ್ರಸ್ತೆ ಬಗ್ಗೆ ಕಾಳಜಿ ಇದ್ದರೆ, ಆರೋಪಿಗಳ ಕುಟುಂಬವನ್ನು ಸಾಮಾಜಿಕವಾಗಿ ಬಹಿಷ್ಕರಿಸಬೇಕು' ಎಂದು ಅವರು ಹೇಳಿದರು.

ಸಂಸದೆ ಮಂಗಲಾ ಅಂಗಡಿ, ಮುಖಂಡರಾದ ಅನಿಲ ಬೆನಕೆ, ಎಂ.ಬಿ. ಝಿರಲಿ, ಮಹಾಂತೇಶ ಕವಟಗಿಮಠ ಇತರರಿದ್ದರು.

# ಕಾಂಗ್ರೆಸ್ ಬೆಂಬಲಿಸಲು ಸಚಿವೆ ಲಕ್ಷ್ಮೀ ಹೆಬ್ಬಾಳಕರ ಮನವಿ



ಸವದತ್ತಿ: ಜಿಲ್ಲೆಯ ಹೊರಗಿನ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರನ್ನು ವಾಪಸ್ ಹುಬ್ಬಳ್ಳಿಗೆ ಕಳುಹಿಸಿ, ಮನೆ ಮಗ ಮೃಣಾಲ್ ಹೆಬ್ಬಾಳಕರ ಅವರನ್ನು ಪಾರ್ಲಿಮೆಂಟಿಗೆ ಕಳುಹಿಸಿಕೊಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಮನವಿ ಮಾಡಿದರು.

ಸವದತ್ತಿ ಕೋರ್ಟ್ ಆವರಣದಲ್ಲಿ ಶನಿವಾರ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಪರ ಮತಯಾಚಿಸಿದ ಸಚಿವರು, ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಬೆಂಬಲಿಸುವಂತೆ ಮನವಿ ಮಾಡಿದರು.

ಜಿಲ್ಲೆಗೆ ಸಾಕಷ್ಟು ಅನ್ಯಾಯ ಎಸಗಿರುವ ವ್ಯಕ್ತಿಗೆ ಮತ್ತೆ ಮಣೆ ಹಾಕುವುದು ಬೇಡ. ಈ ಹಿಂದೆ ಉಸ್ತುವಾರಿ ಸಚಿವರಾಗಿದ್ದ ವೇಳೆ ಯಾವುದೇ ಅಭಿವೃದ್ಧಿ ಕೆಲಸ ಮಾಡದ ಬಿಜೆಪಿ ಅಭ್ಯರ್ಥಿ ಇಂದು ಮೋದಿ ಹೆಸರಿನಲ್ಲಿ ಮತ ಕೇಳುತ್ತಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ ಕಿಡಿ ಕಾರಿದರು.

ಈ ವೇಳೆ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಅವರನ್ನು ಬೆಂಬಲಿಸುವುದಾಗಿ ವಕೀಲರ ಸಂಘ ನಿರ್ಣಯ ಕೈಗೊಂಡಿತು.

ಈ ವೇಳೆ ಶಾಸಕರಾದ ವಿಶ್ವಾಸ್ ವೈದ್ಯ, ಸವದತ್ತಿ ಬಾರ್ ಅಸೋಸಿಯೇಷನ್ ಅಧ್ಯಕ್ಷರಾದ ಸಂಜು ಮತ್ತೀನ್, ಕಾರ್ಯದರ್ಶಿ ಮಂಜುನಾಥ್ ಬಡಿಗೇರ್, ವಿ.ವಿ.ಹಿರೇಮಠ, ಆರ್ಬಿ. ಶಂಕರಗೌಡ, ಜಿ.ಜಿ.ಕಣವಿ, ಎಸ್. ಎಂ. ಸಂಗ್ರೇಶ್ ಕೊಪ್ಪ, ಎಂ.ಎಂ.ಎಲಿಗಾರ್, ಮಹಾಂತೇಶ್ ಮತ್ತಿಕೊಪ್ಪ ಸೇರಿದಂತೆ ಹಲವು ವಕೀಲರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಗ್ಯಾರಂಟಿಗಳು ರಾಜ್ಯದ ಪ್ರಗತಿಗೆ ಹೊಸ ದಿಕ್ಸೂಚಿ: ಪ್ರಕಾಶ ಹುಕ್ಕೇರಿ



ಬೆಳಗಾವಿ: ಕಾಂಗ್ರೆಸ್ ಪಕ್ಷದ 5 ಗ್ಯಾರಂಟಿಗಳು ರಾಜ್ಯದ ಪ್ರಗತಿಗೆ ಹೊಸ ದಿಕ್ಸೂಚಿಯಾಗಿದ್ದು, ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ನಂತರ ಹೊಸ ಗ್ಯಾರಂಟಿಗಳು ಜಾರಿಯಾಗಲಿವೆ. ದೇಶವೇ ಸಮೃದ್ಧಿಯಾಗಲಿದೆ. ಪ್ರಿಯಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಿ ಸಂಸತ್ತಿಗೆ ಕಳುಹಿಸಿ' ಎಂದು ರಾಜ್ಯ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ ಮನವಿ ಮಾಡಿದರು.

ತಾಲೂಕಿನ ಮಾಂಜರಿ, ಅಂಕಲಿ ಸೇ–ರಿದಂತೆ ವಿವಿಧ ಗ್ರಾಮಗಳಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಪರವಾಗಿ ಮತ ಯಾಚಿಸಿ ಮಾತನಾಡಿದ ಅವರು, 'ಚಿಕ್ಕೋಡಿ–ಸದಲಗಾ ಕ್ಷೇತ್ರದಲ್ಲಿ ಈ ಭಾಗದ ಶಾಸಕ ಗಣೇಶ ಹುಕ್ಕೇರಿ ಅವರ ಸಹಯೋಗದಲ್ಲಿ ಸವಳು ಜವಳು ಭೂಮಿ ಸಮಸ್ಯೆ ನೀಗಿಸಲು ಸಾಕಷ್ಟು ಅನುದಾನ ತಂದು ರೈತ–ರಿಗೆ ಅನುಕೂಲ ಕಲ್ಪಿಸಿದ್ದೇವೆ. ಪ್ರವಾಹ ಸಮಸ್ಯೆಯಿಂದಾಗಿ ಹಾನಿಯಾದ ಸಾವಿರಾರು ಮನೆಗಳ ಪುನರ್ ನಿರ್ಮಾಣ ಮಾಡಲಾಗಿದೆ. ಅಭಿವೃದ್ಧಿಯ ಪಥದಲ್ಲಿ ಮುಂದುವರೆಯಲು ಈ ಬಾರಿ ಕಾಂಗ್ರೆಸ್ ಬೆಂಬಲಿಸಿ' ಎಂದರು.

ಶಾಸಕ ಗಣೇಶ ಹುಕ್ಕೇರಿ ಮಾತನಾಡಿ, 'ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸುವ ಮೂಲಕ ಕೈ ಬಲಪಡಿಸಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದ ಚುಕ್ಕಾಣಿ ಹಿಡಿಯಲು ತಮ್ಮ ಸಹಕಾರ ಅತ್ಯವಶ್ಯಕ' ಎಂದರು.

ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಮಾತನಾಡಿ, 'ನುಡುದಂತೆ ನಡೆದ ಸರ್ಕಾರ ಅಂದ್ರೆ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವಾಗಿದೆ. ಪಂಚ ಗ್ಯಾರಂಟಿ ಜಾರಿ ಮಾಡುವುದಾಗಿ ಸಾರ್ವತ್ರಿಕ ವಿಧಾನಸಭೆ ಚುನಾವಣೆಯಲ್ಲಿ ಹೇಳಿ, ಅಧಿಕಾರಕ್ಕೆ ಬಂದಾಗ ಜಾರಿ ಮಾಡಲಾಯಿತು. ಇದೀಗ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಘೋಷಣೆ ಮಾಡಿದ್ದು, ಕೇಂದ್ರದಲ್ಲಿ ಪಕ್ಷ ಅಧಿಕಾರಕ್ಕೆ ಬಂದಲ್ಲಿ ಅನುಷ್ಠಾನಕ್ಕೆ ತರಲಾಗುವುದು' ಎಂದು ಹೇಳಿದರು.

ಮುಖಂಡರಾದ ಡಾ.ಎನ್.ಎ. ಮಗದುಮ್, ಗಣಪತಿ ಧನವಾಡೆ, ಶಿವಾಜಿ ಪವಾರ, ರಮೇಶ ಮುರಚುಟ್ಟೆ, ಸುರೇಶ ಧಾಕನಾಯಿಕ, ಸುಭಾಷ್ ಉಣ್ಣಾಲೆ, ಮೋಹನ ಪಾರೋಲೆ, ಗಣಪತಿ ಮಾನೆ, ಹೂವನ್ನಾ ಚೌಗಲೆ, ದಾದಾ ಮಾಳಿ, ಶಶಿಕಾಂತ ಧನವಾಡೆ, ಶಾಂತಿನಾಥ ಪಣದೆ, ಬಾಬು ಮಿರ್ಜೆ, ಚಂದ್ರು ಲಂಗೋಟೆ ಇದ್ದರು.

# ದೇಶದ ಉತ್ತಮ ಭವಿಷ್ಯ ಹಾಗೂ ಭದ್ರತೆಗಾಗಿ ಬಿಜೆಪಿಗೆ ಬೆಂಬಲಿಸಿ: ಜಗದೀಶ್ ಶೆಟ್ಟರ್

ಬೆಳಗಾವಿ: ದಿನದ 24 ಗಂಟೆ ದೇಶದಲ್ಲಿ ಮೋದಿಯವರು ಕೆಲಸ ಮಾಡಿದ್ದಾರೆ ಹಾಗೂ ಮೋದಿಯವರ ದೂರ ದೃಷ್ಟಿ ದೇಶದ ಚಿತ್ರಣವನ್ನೆ ಬದಲಾವಣೆ ಮಾಡಿದೆ ಹಾಗಾಗಿ ಮತ್ತೊಮ್ಮೆ ಮೋದಿಯವರನ್ನು ಪ್ರಧಾನಿ ಮಾಡಲು ನನ್ನನ್ನು ಗೆಲ್ಲಿಸಬೇಕು ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಮನವಿ ಮಾಡಿದರು.

ನಗರದ ಕೆಎಲ್ಇ ಶೇಷದ್ರಿ ಕಾಲೇಜಿನಲ್ಲಿ ಲೋಕಸಭಾ ಚುನಾವಣೆ ನಿಮಿತ್ಯ ಪ್ರಚಾರ ಸಭೆ ನಡೆಸಿ ಮಾತನಾಡಿದ ಅವರು, ಗುಜರಾತ್ ಮಾಡೆಲ್ ಮೂಲಕ ಮೋದಿಯವರು ದೇಶದಲ್ಲಿ ಮನೆ ಮಾತಾಗಿದ್ದಾರೆ ಅಂತಹ ವ್ಯಕ್ತಿ 2014 ರಲ್ಲಿ ಪ್ರಧಾನಿ ಆದರು. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಲೋಕಸಭಾ ಚುನಾವಣೆಗೆ ಬಹಳಷ್ಟು ಸ್ಥಾನಮಾನ ಇದೆ. ದೇಶದ ಭದ್ರತೆ, ದೇಶದ ಭವಿಷ್ಯ ನಿರ್ಧಾರ ಮಾಡುವ ಚುನಾವಣೆ ಎಂದರೆ ಅದು ಲೋಕಸಭಾ ಚುನಾವಣೆ, ಮೋದಿಯವರು ತಮ್ಮ ಆಡಳಿತ ಅವಧಿಯಲ್ಲಿ ಒಂದೆ ಒಂದು ಕಪ್ಪು ಚುಕ್ಕೆ ಇಲ್ಲದಂತೆ ಆಡಳಿತ ಮಾಡಿದ್ದಾರೆ. ಭ್ರಷ್ಟಾಚಾರ ರಹಿತ ಆಡಳಿತ ಕೊಟ್ಟಿದ್ದಾರೆ. ಹಿಂದಿನ ಯುಪಿಯ ಸರ್ಕಾರದಲ್ಲಿ 2ಜಿ ಹಗರಣ ಸೇರಿದಂತೆ ಅನೇಕ ಹಗರಣಗಳು ಬೆಳಕಿಗೆ ಬಂದವವು, ಲಕ್ಷಾಂತರ ಕೋಟಿಯ ಹಗರಣಗಳ ತನಿಖೆ ಇಂದು ನಡೆಯುತ್ತಿದೆ. ಆದರೆ 10 ವರ್ಷದ ಆಡಳಿತದಲ್ಲಿ ಮೋದಿಯವರು ಒಂದೆ ಒಂದು ಭ್ರಷ್ಟಾಚಾರ ಇಲ್ಲದೆ ಆಡಳಿತ ಮಾಡಿದ್ದಾರೆ ಎಂದು ತಳಿಸಿದರು.

ಹಿಂದಿನ ಸರ್ಕಾರದಲ್ಲಿ 100 ರೂಪಾಯಿ ಜನರಿಗೆ ಬಿಡುಗಡೆ ಆದರೆ ಫಲಾನುಭವಿಗೆ ಕೇವಲ 15 ರೂಪಾಯಿ ತಲುಪತ್ತಿತ್ತು. ಅಷ್ಟೊಂದು ಹಗರಣ ನಡೆಯುತ್ತಿತ್ತು. ಆದ–'ರೆ ಮೊದಿಯವರು ಆಡಳಿತ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿ, ಭ್ರಷ್ಟಾಚಾರ ಕೊನೆಗಾಣಿಸಿದರು. ಕೃಷಿ ಸಮ್ಮಾನ್ ಯೋಜನೆ ಅಡಿ ವರ್ಷಕ್ಕೆ 6 ಸಾವಿರ ರೂ. ನೇರವಾಗಿ ರೈತರ ಖಾತೆಗೆ ಬರುತ್ತಿದೆ. ಇದರಲ್ಲಿ ಒಂದೆ



ಒಂದು ರೂ. ಸೋರಿಕೆ ಆಗುವುದಿಲ್ಲ. ಜನಧನ ಖಾತೆ ಮೂಲಕ ಬಡ ವ್ಯಕ್ತಿ ಕೂಡಾ ಉಚಿತವಾಗಿ ಖಾತೆ ತೆರೆಯಲು ಅವಕಾಶ ನೀಡದ್ದು ಮೋದಿಯವರು. ದೇಶದಲ್ಲಿ ಸದಾ ಕಾಲ ಶಾಂತಿಯುತ ವಾತಾವರಣ ನಿರ್ಮಾಣವಾಗಿರಲು ಮೋದಿಯವರ ಆಡಳಿತ ಮುಖ್ಯವಾಗಿದೆ. ಹೀಗಾಗಿ ಮೇ 7 ರಂದು ಕಮಲ ಚಿಹ್ನೆಗೆ ಮತ ನೀಡುವ ಮೂಲಕ ಗೆಲ್ಲಿಸಬೇಕು ಎಂದು ಜಗದೀಶ್ ಶೆಟ್ಟರ್ ಅವರು ಮನವಿ ಮಾಡಿದರು.

ಬಳಿಕ ಮಾತನಾಡಿದ ಮಾಜಿ ರಾಜ್ಯಸಭಾ ಸದಸ್ಯ ಪ್ರಭಾಕರ ಕೋರೆ ಅವರು, ದೇಶದ ರಕ್ಷಣಾ ವಲಯದಲ್ಲಿ ಸದ್ಯದ ಉತ್ಪಾದನೆ 70% ಇದೆ. ಬುಲೆಟ್ ಪ್ರೂಫ್, ಲೈವ್ ಜಾಕೆಟ್ ಗಳು ಕೂಡಾ ದೇಶದಲ್ಲಿಯೇ ಉತ್ಪಾದನೆ ಮಾಡಲಾಗುತ್ತಿದೆ. ಈ ಹಿಂದೆ ನಮ್ಮ ನಾಯಕರು ಸರಿ ಇರಲಿಲ್ಲ. ಅವ–ರಿಗೆ ಆಮದು ಮಾಡಿಕೊಳ್ಳುವುದು ಅಷ್ಟೇ ಗೊತ್ತಿತ್ತು. ಈ ಹಿಂದೆ ಸೋರ್ಸ್ ಇದ್ದರು ನಮಗೆ ಉತ್ಪಾದನೆ ಮಾಡಲು ಆಗಿಲ್ಲ. ಕ್ರೂಡ್ ಆಯಿಲ್ ನಾವು 100% ಆಮದು ಮಾಡಿಕೊಳ್ಳುತ್ತೇವೆ. ನಮ್ಮಲ್ಲಿ ಸಕ್ಕರೆ ಉತ್ಪಾದನೆ ಆರಂಭ ಆಗಿ 100 ವರ್ಷ ಆಯ್ತು, ನಮ್ಮ ಜಿಲ್ಲೆಯಲ್ಲಿ 28 ಸಕ್ಕರೆ ಕಾರ್ಖಾನೆಗಳಿವೆ. ಸಕ್ಕರೆ ಬೈ ಪ್ರೋಡೆಕ್ಟ್ ಎಥೆನಾಲ್. ನಾನು ನ್ಯಾಷನಲ್ ಶುಗರ್ ಫೆಡ್ರೆಶನ್ ಉಪಾಧ್ಯಕ್ಷ ಇದ್ದೆ, ಇಥೇನಾಲ್ ಉತ್ಪಾದನೆಗೆ ನಾವು 25 ವರ್ಷ ಹೋರಾಟ ಮಾಡಿದ್ದೇವೆ. 10% ಎಥ–'ನಾಲ್ ಪೆಟ್ರೋಲ್ ನಲ್ಲಿ ಸೇರಿಸಬಹುದು. ಆದರೆ ಈ ಹಿಂದೆ ಇದಕ್ಕೆ ಅನುಮತಿ ಸಿಗಲಿಲ್ಲ. ಆದರೆ ಮೋದಿಯವರು ಪ್ರಧಾನಿ ಆದ ಬಳಿಲ ಸಕ್ಕರೆ ಉದ್ಯಮದಲ್ಲಿ ಎಥ–'ನಾಲ್ ಉತ್ಪಾದನೆಗೆ ಉತ್ತೇಜನ ನೀಡಿದರು. ಎಥೆನಾಲ್ ಉತ್ಪಾದನೆಗೆ ಎಲ್ಲಾ ಸಕ್ಕರೆ ಕಾರ್ಖಾನೆಗೆ ಪರವಾನಿಗೆ ಮೋದಿಯವರು ನೀಡಿದರು. ಪೆಟ್ರೋಲಿಯಂ ನಲ್ಲಿ ಇಥಾನಲ್ 10% ದಿಂದ 20% ಸೇರಿಸಬಹುದಾದ ಶಕ್ತಿ ನಮ್ಮಲ್ಲಿ ಬಂದಿದೆ ಎಂದರು.

ಕೇಂದ್ರ ಸಚಿವ ನೀತಿನ್ ಗಡ್ಕರಿ ಅವರು ಹೇಳಿದಂತೆ ಇಥಾನಾಲ್ ನ 100 ಪೆಟ್ರೋಲ್ ಬಂಕ್ಸ್ ಆರಂಭ ಆಗಲಿದೆ. ಮೋದಿಯವರು ಆಡಳಿತದಲ್ಲಿ ಕರ್ನಾಟಕದಲ್ಲಿಯೇ ಅತೀ ಬಡವರು 2.5 ಕೋಟಿ ಜನ ಮಧ್ಯಮ ವರ್ಗಕ್ಕೆ ಬಂದಿದ್ದಾರೆ. ದೇಶದಲ್ಲೇ 16 ಕೋಟಿ ಜನ ಮಧ್ಯಮ ವರ್ಗಕ್ಕೆ ಬಂದಿದ್ದಾರೆ. ಹಾಗಾಗಿ ಮತ್ತೊಮ್ಮೆ ದೇಶದಲ್ಲಿ ಮೋದಿ ಸರ್ಕಾರ ಯಾಕೆ ಬೇಕು ಎಂದು ನಾವೆಲ್ಲರೂ ಅರ್ಥ ಮಾಡಿಕೊಳ್ಳಬೇಕು. ಮೋದಿಯವರ ಕಾರ್ಯಕ್ರಮ ಮನೆ ಮನೆಗೆ ಮುಟ್ಟಬೇಕು. ಹೆಚ್ಚಿನ ಮತ ಜಗದೀಶ್ ಶೆಟ್ಟರ್ ಅವ–ರಿಗೆ ನೀಡಿ ಗೆಲ್ಲಿಸಬೇಕು. ಜಗದೀಶ್ ಶೆಟ್ಟರ್ ಅವರು ತುಂಬಾ ನುರಿತ ವ್ಯಕ್ತಿ ಅವರು ಲೋಕಸಭೆಗೆ ಹೊದರೆ ಬೆಳಗಾವಿ ಜನರಿಗೆ ಅನೂಕುಲ ಆಗಲಿದೆ ಎಂದು ಹೇಳಿದರು.

ಈ ವೇಳೆ ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ್, ಶೇಷಾದ್ರಿ ಕಾಲೇಜಿನ ಪ್ರಾಂಶುಪಾಲ ಎಸ್ ಎ ಪಾಟೀಲ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಬಸವಣ್ಣನವರ ಪಥ ವಿಶ್ವಪಥ: ರತ್ನಪ್ರಭಾ ಬೆಲ್ಲದ

ಬೆಳಗಾವಿ: ವಿಶ್ವಗುರು ಬಸವಣ್ಣನವರು ಯುಗದ ಪ್ರವರ್ತಕರಾಗಿ ಸಮಾಜವನ್ನು ಕಟ್ಟಿ ಬೆಳೆಸಿದವರು.

ಅವರ ಸಂದೇಶ ಇಂದಿನ ಮನ್ವಂತರಕ್ಕೆ ಅಗತ್ಯವಾಗಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಅಧ್ಯಕ್ಷ ರತ್ನಪ್ರಭಾ ಬೆಲ್ಲದ ಅವರು ಹೇಳಿದರು.

ಅವರು ಕೆಎಲ್ಇ ಸಂಸ್ಥೆಯ ಜಿ. ಎ. ಸಂಯುಕ್ತ ಪದವಿಪೂರ್ವ ಕಾಲೇಜನಲ್ಲಿ ಜರುಗಿದ ಜಗಜ್ಯೋತಿ ಬಸವೇಶ್ವರ ಜಯಂತಿ ಉತ್ಸವ ಸಮಿತಿ ಹಾಗೂ ಬೆಳಗಾವಿ ಜಿಲ್ಲಾ ಘಟಕ ಮಹಾಸಭೆ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯನ್ನು ದಿನಾಂಕ 27.4.2024 ರಂದು ಉದ್ಘಾಟಿಸಿ ಮಾತನಾಡಿದರು.



ಬಸವಣ್ಣನವರು ಸಾಮಾಜಿ–ಕ ಧಾರ್ಮಿಕ ಕ್ರಾಂತಿಯ ಹರಿಕಾರರಾಗಿ ಸಮಾಜದಲ್ಲಿ ಬೇರು ಬಿಟ್ಟಿದ್ದ ಜಾತಿ ವರ್ಗ ಲಿಂಗ ತಾರತಮ್ಯತೆಗಳನ್ನು ಹೋಗಲಾಡಿಸಿದರು. ಸಮಾನತೆಯ ಸಮಾಜವನ್ನು ಕಟ್ಟಲು ಶರಣ–ರು ಮಾಡಿದ ಕ್ರಾಂತಿ ಇಂದಿಗೂ ಪ್ರಸ್ತುತವೆನಿಸಿದೆ. ನಮ್ಮಲ್ಲಿ ಇಂದಿಗೂ ಸಾಮಾಜಿಕ ಜಾಢ್ಯತೆಯು ಜೀವಂತವಾಗಿ ಉಳಿದುಬಂದಿದೆ. ರಾಜಕಾರಣ ಅವೆಲ್ಲವೂಗಳನ್ನು ಪೋಷಿಸಿಕೊಂಡು ಬರುತ್ತಿರುವುದು ದುರಂತದ ಸಂಗತಿ. ಮಕ್ಕಳಲ್ಲಿ ಶರಣರ ವಿಚಾರಗಳನ್ನು ಬಿತ್ತುವ ಹಾಗೂ ವಚನ ಸಂಸ್ಕೃತಿಯನ್ನು ಮೂಡಿಸುವಗೋಸ್ಕರ ಮಹಾಸಭೆ ಹಾಗೂ ಬಸವ ಜಯಂತಿ ಉತ್ಸವ ಸಮಿತಿ ಪ್ರತಿವರ್ಷ ಪ್ರಬಂಧ ಸ್ಪರ್ಧೆಗಳನ್ನು ಪ್ರಾಥಮಿಕ ಮಾಧ್ಯಮಿಕ ಪದವಿಪೂರ್ವ ಕಾಲೇಜು ಹಾಗೂ ಎಲ್ಲಾ ವಯೋಮಾನದವರಿಗೆ ಆಯೋಜಿಸುವ ಮೂಲಕ ಜಾಗೃತಿ ಉಂಟು ಮಾಡುತ್ತಿದೆ. ಬಸವಣ್ಣನವರ ಜೀವನ ಸಂದೇಶವನ್ನು ಅರಿತು ವಿದ್ಯಾರ್ಥಿಗಳು ಶರಣ ಪರಂಪರೆಯನ್ನು ಮುಂದುವ–ರಿಸಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಬೆಳಗಾವಿ ಜಿಲ್ಲಾ ಘಟಕ ಮಹಾಸಭೆಯ ಉಪಾಧ್ಯಕ್ಷೆ ಡಾ. ಗುರುದೇವಿ ಹುಲೆಪ್ಪನವರಮಠ ಮಾತನಾಡುತ್ತ, ಬಸವಣ್ಣವರು ಹಾಗೂ ಇತರ ಶರಣರ ಜೀವನ ಸಂದೇಶವನ್ನು ಮಕ್ಕಳು ಅರಿಯಲೆಂಬ ಸದ್ದುದ್ದೇಶದಿಂದ ಪ್ರಬಂಧ ಸ್ಪರ್ಧೆಗಳನ್ನು ನೃತ್ಯ–ರೂಪಕ ಮೊದಲಾದ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ, ಸ್ಪರ್ಧಾ ವಿಜೇತರಿಗೆ ಬರುವ ಮೇ 8ರಂದು ಬಹುಮಾನಗಳನ್ನು ವಿತರಿಸಲಾಗುವುದು ಎಂದು ಹೇಳಿದರು. ಪ್ರಬಂಧ ಸ್ಪರ್ಧೆಯ ರೂಪರೇಷೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಬಸವ ಜಯಂತಿ ಉತ್ಸವ ಸಮಿತಿ ಅಧ್ಯಕ್ಷರಾದ ಗುರುದೇವ್ ಪಾಟೀಲ, ಬಾಲಚಂದ್ರ ಬಾಗಿ, ಪ್ರಸಾದ್ ಹಿರೇಮಠ, ವೀಣಾ ನಾಗಮೋತಿ, ರಕ್ಷಾ ದೇಗಿನಾಳ, ವೀರೇಶ ಅಪ್ಪಯ್ಯನವರಮಠ. ರಾಜೇಂದ್ರ ಶೀಲವಂತ, ಸಂಜಯ ಪಾವಟೆ, ಕಿರಣ್ ಅಗಡಿ, ಡಾ. ಮಹೇಶ್ ಗುರನಗೌಡರ, ಜಿಎ ಸಂಯುಕ್ತಪದವಿಪೂರ್ವ ಕಾಲೇಜಿನ ಸಿಬ್ಬಂದಿ ಉಪಸ್ಥಿತರಿದ್ದರು. ವಿವಿಧ ಶಾಲಾ ಕಾಲೇಜುಗಳಿಂದ 70ಕ್ಕೂ ಹೆಚ್ಚು ಸ್ಪರ್ಧಾಳುಗಳು ಪ್ರಬಂಧ ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದರು.

## ಚುನಾವಣಾ ಕರ್ತವ್ಯಕ್ಕೆ ಹಾಜರಾಗಿದ್ದ ಶಿಕ್ಷಕಿ ಸಾವು



ಬೆಂಗಳೂರು: ರಾಜ್ಯದಲ್ಲಿ ನಡೆದ ಲೋಸಭಾ ಚುನಾವಣೆಯ ಮೊದಲ ಹಂತದ ಮತದಾನದಲ್ಲಿ ಚುನಾವಣಾ ಕರ್ತವ್ಯಕ್ಕೆ ಹಾಜರಾಗಿದ್ದ ಶಿಕ್ಷಕಿಯೊಬ್ಬರು ಸಾವನ್ನಪ್ಪಿರುವ ಘಟನೆ ನಡೆದಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ಹೊರವಲಯದ ರೋಜಿಪುರ ಮತಗಟ್ಟೆ 155ರಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶಿಕ್ಷಕಿ ಕವಿತಾ ಇದ್ದಕ್ಕಿದ್ದಂತೆ ಅಸ್ವಸ್ಥಗೊಂಡು ಮೃತಪಟ್ಟಿದ್ದಾರೆ.

ನೆಲಮಂಗಲ ತಾಲೂಕಿನ ಮಾರಗೊಂಡನಹಳ್ಳಿ ನಿವಾಸಿಯಾಗಿರುವ 35 ವರ್ಷದ ಕವಿತಾ ಚುನಾವಣಾ ಕರ್ತವ್ಯದಲ್ಲಿದ್ದಾಗಲೇ ಶಾಲೆಯಲ್ಲಿ ಕುಸಿದುಬಿದ್ದಿದ್ದಾರೆ. ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾ–ರಿಯಾಗದೇ ಕವಿತಾ ಕೊನೆಯುಸಿರೆಳೆದಿದ್ದಾರೆ.

## ಕಾರಂಜಿಮಠದಲ್ಲಿ 274ನೇ ಶಿವಾನುಭವ ಹಾಗೂ ಬಸವ ಜಯಂತಿ ಕಾರ್ಯಕ್ರಮ

ಬೆಳಗಾವಿ: ಶಿವಬಸವನಗರ ಕಾರಂಜಿಮಠದ ಶಿವಾನುಭವ ಮಂಟಪದಲ್ಲಿ 274ನೇ ಶಿವಾನುಭವ ಕಾರ್ಯಕ್ರಮವು ಸೋಮವಾರ ದಿನಾಂಕ 6 ಮೇ 2024ರಂದು ಸಾಯಂಕಾಲ 6 ಗಂಟೆಗೆ ಜರುಗುವುದು. ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯ ಶ್ರೀ ಮ.ನಿ.ಪ್ರ. ಗುರುಸಿದ್ಧ ಮಹಾಸ್ವಾಮಿಗಳು ವಹಿಸಲಿದ್ದು, ಖ್ಯಾತ ವಕೀಲರು, ಗುರುದೇವ ರಾನಡೆ ಮಂದಿರದ ಅಕಾಡೆಮಿ ಆಫ್ ಕಂಪೇರೆಟಿವ್ ರಿಲಿಜನ್ ಆ್ಯಂಡ್ ಫಿಲಾಸಫಿ ಸಂಸ್ಥೆಯ ಕಾರ್ಯದರ್ಶಿಗಳಾದ ಶ್ರೀ ಎಂ. ಬಿ. ಝಿರಲಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಖ್ಯಾತ ಸಾಹಿತಿಗಳಾದ ಶ್ರೀ ಶಿರೀಷ ಜೋಶಿ ಅವರು "ಬಸವಣ್ಣನವರ ವಚನಗಳಲ್ಲಿ ಸಂಗೀತ" ಎಂಬ ವಿಷಯ ಕುರಿತು ಉಪನ್ಯಾಸ ನೀಡುವರು.

ಪಿ. ಯು.ಸಿ. ಪರೀಕ್ಷೆಯಲ್ಲಿ ಪಾಸಾದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಮತ್ತು ಶ್ರೀ ಕಾರಂಜಿಮಠದ ಕುಮಾರೇಶ್ವರ ಸಂಗೀತ ಪಾಠಶಾಲೆಯ ಮಕ್ಕಳಿಂದ ಪ್ರಾರ್ಥನೆ ಜರುಗುವುದು ಎಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಶ್ರೀಶೈಲ ಪೀಠದ ಡಾ. ಚನ್ನಸಿದ್ಧರಾಮ ಶಿವಾಚಾರ್ಯ ಸ್ವಾಮೀಜಿ ಆಶೀರ್ವಾದ ಪಡೆದ ಯುವ ನಾಯಕ ರಾಹುಲ್ ಜಾರಕಿಹೊಳಿ



ಚಿಕ್ಕೋಡಿ : ತಾಲೂಕಿನ ಸುಕ್ಷೇತ್ರ ಯಡೂರಿನ ಶ್ರೀ ವೀರಭದ್ರೇಶ್ವರ ಭದ್ರಕಾಳೇಶ್ವರಿ ದೇವಸ್ಥಾನಕ್ಕೆ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಭೇಟಿ ನೀಡಿ, ಮಹಾ ಭದ್ರಕಾಳೇಶ್ವರಿ ದೇವಿಯ ದರ್ಶನ ಪಡೆದರು.

ಬಳಿಕ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಶ್ರೀಶೈಲ ಪೀಠದ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಶ್ರೀಶೈಲ ಗಿರಿರಾಜ ಸೂರ್ಯ ಸಿಂಹಾಸನಾಧೀಶ್ವರ ಸ್ವಾಮಿಜಿಗಳ ಆಶೀರ್ವಾದ ಪಡೆದರು.

## ಕಾಂಗ್ರೆಸ್ ಅಧಿಕಾರಕ್ಕೆ ಬಂದ್ರೆ ಅಗ್ನಿವೀರ್ ಯೋಜನೆ ರದ್ದು: ರಾಹುಲ್ ಗಾಂಧಿ ಘೋಷಣೆ



ಬಳ್ಳಾರಿ: ದೇಶದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಅಗ್ನಿವೀರ್ ಯೋಜನೆ ರದ್ದು ಮಾಡುವುದಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಬಳ್ಳಾರಿಯಲ್ಲಿ ನಡೆದ ಪ್ರಜಾಧ್ವನಿ 2 ಸಮಾವೇಶದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಭಾರತೀಯ ಚೊಂಬು ಪಾರ್ಟಿಯಿಂದ ಜನರಿಗೆ ಖಾಲಿ ಚೊಂಬು ಹೊರತಾಗಿ ಬೇರೇನು ಸಿಕ್ಕಿಲ್ಲ ಎಂದು ಹೇಳಿದ್ದಾರೆ.

ನಾವು ಬಂದರೆ ಸದ್ಯ ಇರುವಂತ ಜಿಎಸ್ಟಿ ಬದಲಿ ಸರಳ ಜಿಎಸ್ಟಿ ಯೋಜನೆ ಜಾರಿಗೆ ತರಲಾಗುತ್ತದೆ. ಸರಳ ಜಿಎಸ್ಟಿಯಿಂದ ರೈತರು, ಬಡವರು, ಕಾರ್ಮಿಕರಿಗೆ ನೆರವಾಗಲಿದೆ ಎಂದರು.

ರೈತರ ಸಾಲ ಮನ್ನಾ ಮಾಡದ ಮೋದಿ ಶ್ರೀಮಂತರ 16 ಲಕ್ಷ ಕೋಟಿ ರೂ. ಸಾಲ ಮನ್ನಾ ಮಾಡಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೈತರ ಸಾಲ ಮನ್ನಾ ಮಾಡಲಾಗುವುದು. ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗದಿಪಡಿಸಲಾಗುವುದು ಎಂದು ಹೇಳಿದ್ದಾರೆ.

## ಗ್ಯಾರಂಟಿ ಯೋಜನೆಗಳನ್ನು ಯಾವ ಕಾರಣಕ್ಕೂ ನಿಲ್ಲಿಸಲ್ಲ: ಸಿಎಂ ಸಿದ್ದರಾಮಯ್ಯ



ಕಲಬುರಗಿ: ನಗರದ ಕಣ್ಣಿ ಮಾರ್ಕೆಟ್ ಹತ್ತಿರದ ಮೈದಾನದಲ್ಲಿ ಆಯೋಜಿಸಲಾಗಿದ್ದ ಕಾಂಗ್ರೆಸ್ ಸಮಾವೇಶದಲ್ಲಿ ಅಬ್ಬರದ ಭಾಷಣ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ದೊಡ್ಮನಿ ಪರ ಮತ ಯಾಚನೆ ಮಾಡಿದರು.

ಪಕ್ಷದ ರಾಷ್ಟ್ರೀಯ ನಾಯಕರು ಕಾಂಗ್ರೆಸ್ ಪ್ರಣಾಳಿಕೆಯಲ್ಲಿ 25 ಗ್ಯಾರಂಟಿಗಳನ್ನು ನೀಡಿದ್ದಾರೆ ಮತ್ತು ಅಧಿಕಾರಕ್ಕೆ ಬಂದರೆ ಅವೆಲ್ಲವನ್ನು ಜಾರಿಗೆ ತರುತ್ತಾರೆ.

ಕಾಂಗ್ರೆಸ್ ಯಾವತ್ತಿಗೂ ನುಡಿದಂತೆ ನಡೆಯುವ ಪಕ್ಷ ಎಂದು ಸಿದ್ದರಾಮಯ್ಯ ಹೇಳಿದರು.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ನಾವು ನೀಡಿದ 5 ಗ್ಯಾರಂಟಿಗಳನ್ನು ಜಾರಿಗೆ ತರಲ್ಲ ಅಂತಅ ಬಿಜೆಪಿ ನಾಯಕರು ಪ್ರಚಾರ ಮಾಡುತ್ತಿದ್ದರು, ಅದರೆ ಅವುಗಳನ್ನು ನಮ್ಮ ಸರ್ಕಾರ ಜಾರಿಗೆ ತಂದಿತು. ಗ್ಯಾರಂಟಿ ಯೋಜನೆಗಳಿಂದ ಖಜಾನೆ ಖಾಲಿಯಾಗಿದೆ,

ಹಾಗಾಗಿ ಅಭಿವೃದ್ಧಿ ಕಾರ್ಯಗಳು ನಿಂತು ಹೋಗಿವೆ ಅಂತಲೂ ಅಪಪ್ರಚಾರ ಮಾಡಿದರು. ಈಗ ಲೋಕಸಭಾ ಚುನಾವಣೆ ಬಳಿಕ ಗ್ಯಾರಂಟಿ ಯೋಜನೆಗಳು ನಿಂತು ಹೋಗುತ್ತವೆ.

ಅಂತ ಮತ್ತೇ ಅದೇ ಬಿಜೆಪಿ ನಾಯಕರು ಹೇಳುತ್ತಿದ್ದಾರೆ ಎಂದ ಸಿದ್ದರಾಮಯ್ಯ, ನಮ್ಮ ಮೇಲೆ ನಿಮಗೆ ವಿಶ್ವಾಸವಿರಲಿ, ಯಾವ ಕಾರಣಕ್ಕೂ ಸರ್ಕಾರದ ಅವಧಿ ಮುಗಿಯುವವರೆಗೆ ಅವುಗಳನ್ನು ನಿಲ್ಲಿಸಲ್ಲ ಮತ್ತು ಮುಂದಿನ ಅವಧಿಗೂ ಕಾಂಗ್ರೆಸ್ ಅಧಿಕಾರಕ್ಕೆ ಬರಲಿರುವುದರಿಂದ ಅ ಯೋಜನೆಗಳನ್ನು ಮುಂದುವರಿಸಲಾಗುವುದು ಎಂದರು.

## ಮಂಗಸೂಳಿ ಪಾಲಿಟೆಕ್ನಿಕ್ ಕಾಲೇಜು ಮಂಜೂರಾತಿಗೆ ಶೀಘ್ರದಲ್ಲೇ ಕ್ರಮ: ಸಚಿವ ಸತೀಶ್ ಜಾರಕಿಹೊಳಿ

### ಮಂಗಸೂಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಮರಾಠ ಸಮುದಾಯದ ಮುಖಂಡರ ಸಭೆ



ಕಾಗವಾಡ: ಬೆಳಗಾವಿ ಜಿಲ್ಲೆಯಲ್ಲಿ ರಸ್ತೆ, ನೀರಾವರಿ ಯೋಜನೆ ಸೇರಿದಂತೆ ಅನೇಕ ಅಭಿವೃದ್ಧಿ ಕೆಲಸಗಳಿಗೆ ಆದ್ಯತೆ ನೀಡಿದ್ದೇವೆ. ಆದ್ದರಿಂದ ಚಿಕ್ಕೋಡಿ ಕ್ಷೇತ್ರದಿಂದ ಈ ಬಾರಿ ಪ್ರಿಯಂಕಾ ಜಾರಕಿಹೊಳಿಗೆ ಅವಕಾಶ ಕಲ್ಪಿಸಿದರೆ ಇನ್ನಷ್ಟು ಜಿಲ್ಲೆಯನ್ನು ಪ್ರಗತಿಯತ್ತ ಕೊಂಡೊಯಲು ಅನುಕೂಲವಾಗುತ್ತದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ಕಾಗವಾಡ ತಾಲೂಕಿನ ಮಂಗಸೂಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಮರಾಠ ಸಮುದಾಯದ ಮುಖಂಡರ ಸಭೆಯಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿಗೆ ಮಾಲಾರ್ಪಣೆ ಮಾಡಿ ಅವರು ಮಾತನಾಡಿ, ಮಂಗಸೂಳಿ ಗ್ರಾಮದಲ್ಲಿ ಪಾಲಿಟೆಕ್ನಿಕ್ ಕಾಲೇಜು ಮಂಜೂರಾತಿಗೆ ಸಂಬಂಧಿಸಿದ ಸಚಿವರೊಂದಿಗೆ ಚರ್ಚಿಸಿ, ಶೀಘ್ರದಲ್ಲೇ ಕಾಲೇಜು ಮಂಜೂರಾತಿಗೆ ಶ್ರಮಿಸಲಾಗುವುದು.

ಏನೆ ಸಮಸ್ಯೆಗಳಿದ್ದರೆ ಸ್ಥಳೀಯ ಶಾಸಕರಾದ ರಾಜು ಕಾಗೆ ಅವರು, ನಾವು ಸೇರಿ ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸುತ್ತೇವೆ. ಆದರೆ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

ಇನ್ನೂ ರಾಜು ಕಾಗೆಯವರಾಗಲಿ, ನಾವಾಗಲಿ ಯಾವತ್ತೂ ಜಾತಿ ರಾಜಕಾರಣ ಮಾಡಿದವರಲ್ಲ. ಜನರ ನಡುವೆ ದ್ವೇಷವನ್ನು ಬಿತ್ತುವರಲ್ಲ. ಅದಕ್ಕಾಗಿ ಪ್ರಿಯಂಕಾ ಜಾರಕಿಹೊಳಿಗೆ ಅವರನ್ನು ಆಯ್ಕೆಮಾಡಿ ನಮ್ಮ ಕೈ ಬಲಪಡಿಸಿ ಎಂದರು.

ಶಾಸಕ ರಾಜು ಕಾಗೆ ಮಾತನಾಡಿ, ನಾವೆಲ್ಲರೂ ಒಗ್ಗಟ್ಟಿನಿಂದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸೋಣ. ಸ್ಥಳೀಯವಾಗಿ ಏನೆ ಸಮಸ್ಯೆಗಳಿದ್ದರೆ ಮುಂದಿನ ದಿನಗಳಲ್ಲಿ ಬಗೆ ಹರಿಸೋಣ ಎಂದು ಹೇಳಿದರು.

ಇದೇ ವೇಳೆ ಹಲವು ಮರಾಠ ಸಮುದಾಯದ ಮುಖಂಡರು ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ಮರಾಠಾ ಸಮುದಾಯದ ಮುಖಂಡರನ್ನು ಸಚಿವ ಸತೀಶ್ ಜಾರಕಿಹೊಳಿ ಅವರು ಸತ್ಕ–ರಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ದಿಗ್ವಿಜಯ ಪವಾರ್, ರಮೇಶ್ ಸಿಂದಗಿ, ರಾವಸಾಬ್ ಐಹೊಳೆ ಸೇರಿದಂತೆ ಹಲವಾರು ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

## ಬೆಳಗಾವಿಯಲ್ಲಿ ಹೆಚ್ಚಿನ ಅಭಿವೃದ್ಧಿ ಕಾಂಗ್ರೆಸ್ ಕಾಲದಲ್ಲೇ ಆಗಿದ್ದು : ಸಚಿವೆ ಲಕ್ಷ್ಮೀ ಹೆಬ್ಬಾಳಕರ ತಿರುಗೇಟು

### ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ಘೋಷಿಸಿದ ಬೈಲಹೊಂಗಲ ಬಾರ್ ಅಸೋಸಿಯೇಷನ್

ಬೈಲಹೊಂಗಲ: ಬೆಳಗಾವಿ ಜಿಲ್ಲಾ ಅಭಿವೃದ್ಧಿಗೆ ಕಾಂಗ್ರೆಸ್ ಕೊಡುಗೆ ಅಪಾರ. ಬೆಳಗಾವಿಯಲ್ಲಿ ಆಗಿರುವ ಅಭಿವೃದ್ಧಿ ಕೆಲಸಗಳೆಲ್ಲವೂ ಕಾಂಗ್ರೆಸ್ ಕಾಲದಲ್ಲಿಯೇ ಆಗಿದ್ದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಜಗದೀಶ್ ಶೆಟ್ಟರ್ ಹೇಳಿಕೆಗೆ ತಿರುಗೇಟು ನೀಡಿದರು.

ಬೆಳಗಾವಿ ಅಭಿವೃದ್ಧಿಗೆ ಕಾಂಗ್ರೆಸ್ ಕೊಡುಗೆ ಏನು ಎಂದು ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಹೇಳಿಕೆಗೆ ಖಾರವಾಗಿ ಪ್ರತಿಕ್ರಿಯಿಸಿದ ಸಚಿವರು, ಬೆಳಗಾವಿ ಅಭಿವೃದ್ಧಿಗೆ ಬಿಜೆಪಿಯವರ ಕೊಡುಗೆ ಏನೆಂದು ಮೊದಲು ಶೆಟ್ಟರ್ ಅವರು ಹೇಳಲಿ ಎಂದು ಸವಾಲು ಹಾಕಿದರು.



ಬೈಲಹೊಂಗಲ ಬಾರ್ ಅಸೋಸಿಯೇಷನ್ ನಲ್ಲಿ ಶನಿವಾರ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಪರ ಮತಯಾಚಿಸಿದ ಸಚಿವರು, ಜಗದೀಶ್ ಶೆಟ್ಟರ್ ಅವಂತಹ ಅವಕಾಶವಾದಿ ರಾಜಕಾರಣಿ ನಮ್ಮ ಜಿಲ್ಲೆಗೆ ಬೇಕಾ ಎಂದು ಪ್ರಶ್ನಿಸಿದರು.

ಬೆಳಗಾವಿ ಜಿಲ್ಲೆಗೆ ಕಾಂಗ್ರೆಸ್ ಕೊಡುಗೆ ಏನು ಅಂತ ಶೆಟ್ಟರ್ ಕೇಳಿದ್ದಾರೆ? ಜಿಲ್ಲೆಗೆ ಅಣೆಕಟ್ಟು, ಶಾಲೆಗಳು, ಆಸ್ಪತ್ರೆಗಳು, ಬಿಮ್ಸ್, ಅನೇಕ ಕಾಲೇಜುಗಳನ್ನು ಕಟ್ಟಿದ್ದು ಕಾಂಗ್ರೆಸ್ ಕಾಲದಲ್ಲಿ. ನಾನು ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆಯಾದ ಕೇವಲ 9 ತಿಂಗಳಲ್ಲಿ ಅಲ್ಲಿನ ಒಳಚರಂಡಿ ಸಮಸ್ಯೆಯನ್ನು ಇತ್ಯರ್ಥಪಡಿಸಿದೆ. ಒಳಚರಂಡಿ ವ್ಯವಸ್ಥೆಗಾಗಿ 320 ಕೋಟಿ ರೂಪಾಯಿ ಬಿಡುಗಡೆ ಮಾಡಿಸಿದೆ. ಉಡುಪಿ ಕೋರ್ಟ್ ಗೆ 11 ಕೋಟಿ ರೂ. ಬಿಡುಗಡೆ ಮಾಡಿಸಿದೆ. ಕೊಲ್ಲೂರು ಮೂಕಾಂಬಿಕಾ ದೇವಸ್ಥಾನದ ಆವರಣದಲ್ಲಿದ್ದ ಪಾರ್ಕಿಂಗ್ ಸಮಸ್ಯೆಯನ್ನು ಇತ್ಯರ್ಥಗೊಳಿಸಿದೆ. ಆದರೆ ಶೆಟ್ಟರ್ 2 ಬಾರಿ ಜಿಲ್ಲಾ ಉಸ್ತುವಾರಿ ಸಚಿವರಾಗಿ ಏನು ಮಾಡಿದ್ದಾರೆ. ಉಪಕಾರ ಮಾಡುವುದಿರಲಿ, ಇಲ್ಲಿಂದ ಯೋಜನೆಗಳನ್ನು ಒಯ್ಯುವ ಮೂಲಕ ಅನ್ಯಾಯ ಮಾಡಿದ್ದಾರೆ ಎಂದರು.

ನಾನು ಕನಸಿನಲ್ಲೂ ಎಣಿಸಿರಲಿಲ್ಲ, ಮೃಣಾಲ್ ಗೆ ಟಿಕೆಟ್ ಸಿಗುತ್ತೆ ಅಂತ. ಪಕ್ಷದ ಆಸೆಯಂತೆ ಮೃಣಾಲ್ ಗೆ ಟಿಕೆಟ್ ನೀಡಲಾಗಿದೆ.

ನಾನು ಕೂಡ 2014ರ ಚುನಾವಣೆಯಲ್ಲಿ ನಿಂತು ಸೋತೆ. ಅಂದಿನ ಸೋಲನ್ನ ಇಂದು ಮೃಣಾಲ್ ಹೆಬ್ಬಾಳಕರ ಮೂಲಕ ಗೆಲ್ಲಬೇಕು ಎಂದು ಸಚಿವರು ಹೇಳಿದರು. ಆರು ಬಾರಿ ಶಾಸಕರಾಗಿ, ಮುಖ್ಯಮಂತ್ರಿ ಆಗಿ, ಎರಡು ಬಾರಿ ವಿರೋಧ ಪಕ್ಷದ ನಾಯಕರಾಗಿ, ಬಿಜೆಪಿ ರಾಜ್ಯಾಧ್ಯಕ್ಷರಾಗಿದ್ದ ಶೆಟ್ಟರ್ ಇಂದು ಮೋದಿ ನೋಡಿ ಮತ ಹಾಕಿ ಅಂತಿದ್ದಾರೆ. ಸ್ವಸಾಮರ್ಥ್ಯ ಇಲ್ಲದ ವ್ಯಕ್ತಿ ನಮಗೆ ಬೇಕಾ ಎಂದು ಪ್ರಶ್ನಿಸಿದರು.

**ಬೆಂಬಲ ಘೋಷಣೆ:**

ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಅವ–ರಿಗೆ ಮುಂಬರುವ ಚುನಾವಣೆಯಲ್ಲಿ ಬೆಂಬಲಿಸುವುದಾಗಿ ಬೈಲಹೊಂಗಲ ಬಾರ್ ಅಸೋಸಿಯೇಷನ್ ವತಿಯಿಂದ ತೀರ್ಮಾನ ತೆಗೆದುಕೊಳ್ಳಲಾಯಿತು. ಈಗಾಗಲೇ ಗೋಕಾಕ್, ರಾಮದುರ್ಗ ಬಾರ್ ಅಸೋಸಿಯೇಷನ್ ವತಿಯಿಂದ ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ಘೋಷಿಸಲಾಗಿದೆ. ಈ ವೇಳೆ ಕಿತ್ತೂರು ಶಾಸಕ ಬಾಬಾ ಸಾಹೇಬ್ ಪಾಟೀಲ ಮಾತನಾಡಿದರು.

ವಕೀಲರ ಸಂಘದ ಅಧ್ಯಕ್ಷರಾದ ಎಂ.ಆರ್. ಮೆಳವಂಕಿ, ಉಪಾಧ್ಯಕ್ಷರಾದ ಎ.ಎಂ.ಶಿದ್ರಾಮನಿ, ಪ್ರಧಾನ ಕಾರ್ಯದರ್ಶಿಗಳಾದ ವಿ.ಜಿ.ಕಟದಾಳ, ಸಹ ಕಾರ್ಯದರ್ಶಿಗಳಾದ ವಿ.ಪಿ.ಪೂಜೇರಿ, ಜಿಲ್ಲಾ ಕಾಂಗ್ರೆಸ್ ಮುಖಂಡರಾದ ಮಹಾಂತೇಶ್ ಅಣ್ಣ ಮತ್ತಿಕೊಪ್ಪ, ಶ್ರೀಶೈಲ್ ಅಬ್ಬಾಯಿ, ಬಸವರಾಜ್ ಕೌಜಲಗಿ, ರಮೇಶ್ ಕೋಲ್ಕರ್, ಪ್ರೇಮಾ ಬಿ ಬಡಿಗೇರ, ಭಾಗ್ಯಶ್ರೀ ಸೇರಿದಂತೆ ಹಲವು ವಕೀಲರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089